ಸಂಪುಟ : 9 ಸಂಚಿಕೆ 131 ಪುಟ : 4 ಬೆಲೆ: 3.00 ಗುರುವಾರ ಜೂನ್ 27 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 131 Pages : 4 Price : 3.00 Thursday June 27 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಉಭಯ ಶ್ರೀಗಳ ಮಹಾರಥೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಪಂ.ಪಂಚಾಕ್ಷರಿ ಗವಾಯಿಗಳವರ ಹಾಗೂ ಪಂ.ಪುಟ್ಟರಾಜ ಕವಿ ಗವಾಯಿಗಳವರ ಪುಣ್ಯಸ್ಮರಣೆಯ ಅಂಗವಾಗಿ ಬುಧವಾರ ಸಂಜೆ ಉಭಯ ಶ್ರೀಗಳ ಮಹಾರಥೋತ್ಸವ ಜರುಗಿತು.

ಉಭಯ ಶ್ರೀಗಳ ಬೆಳ್ಳಿ ಮೂರ್ತಿಗಳನ್ನು ಗದ್ದುಗೆಯಿಂದ ಮಹಾತೇರಿನವರೆಗೆ ಮೆರವಣಿಗೆ ಮೂಲಕ ಸಾಗಿ ಬರುವಾಗ ಶ್ರೀಗುರು ಪಂಚಾಕ್ಷರಿ ಗವಾಯಿಗಳವರ ನಾಮಾವಳಿಗಳನ್ನು ಅಶ್ರಮದ ವಿದ್ಯಾರ್ಥಿಗಳು ಪಠಿಸಿದರು. ನಾಡಿನ ಮೂಲೆ ಮೂಲೆಗಳಿಂದ ಆಗಮಿಸಿದ ಸಾವಿರಾರು ಭಕ್ತರು ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ಪುನೀತರಾದರು.



ರಥೋತ್ಸವದ ಉದ್ದಗಲಕ್ಕೂ ಶ್ರೀಗುರು ಹಾನಗಲ್ ಕುಮಾರೇಶ್ವರ ಶ್ರೀಗಳು, ಪಂ. ಪಂಚಾಕ್ಷರಿ ಗವಾಯಿಗಳು ಹಾಗೂ ಪಂ. ಪುಟ್ಟರಾಜ ಕವಿ ಗವಾಯಿಗಳವರಿಗೆ ಜಯಘೋಷಗಳನ್ನು ಹೇಳುತ್ತ ಮುಂದೆ ಸಾಗಿದರು.

ರಥೋತ್ಸವದಲ್ಲಿ ಹುಬ್ಬಳ್ಳಿಯ ಮೂರುಸಾವಿರ ಮಠದ ಪೂಜ್ಯಶ್ರೀ ಜಗದ್ಗುರು ಗುರುಸಿದ್ದ ರಾಜಯೋಗೀಂದ್ರ ಮಹಾಸ್ವಾಮಿಗಳು, ಅಡ್ನೂರ ದಾಸೋಹ ಶ್ರೀಮಠದ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು, ವೀರೇಶ್ವರ ಪುಣ್ಯಾಶ್ರಮದ ಪೂಜ್ಯಶ್ರೀ ಕಲ್ಲಯ್ಯಜ್ಜನವರು ಹಾಗೂ ಹರ-ಗುರು-ಚರ ಮೂರ್ತಿಗಳು ಸೇರಿದಂತೆ ಸಾವಿರಾರು ಭಕ್ತರು ಜಾತ್ರಾ ಮಹೋತ್ಸವಕ್ಕೆ ಸಾಕ್ಷಿಯಾದರು.

### ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ನೇತೃತ್ವದಲ್ಲಿ ತಾಲೂಕಾ ಮಟ್ಟದ ಜನಸ್ಪಂದನ ಕಾರ್ಯಕ್ರಮ

## ಸಾರ್ವಜನಿಕರ ಅಲೆದಾಟ ತಪ್ಪಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಯಾವುದೇ ಇಲಾಖೆಗೆ ಸಾರ್ವಜನಿಕರಿಂದ ಬಂದ ಅರ್ಜಿಗಳನ್ನು, ಅಹವಾಲುಗಳನ್ನು ಅಧಿಕಾರಿಗಳು ನಿರ್ಲಕ್ಷ್ಯ ಮಾಡದೆ ಪರಿಶೀಲಿಸಿ ಶೀಘ್ರ ವಿಲೇವಾರಿ ಮಾಡಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಹೇಳಿದರು.

ಅವರು ಪಟ್ಟಣದ ತಾ.ಪಂ ಸಭಾಂಗಣದಲ್ಲಿ ಗದಗ ತಾಲೂಕಿನ ಸಾರ್ವಜನಿಕರಿಂದ ಅಹವಾಲು ಕುಂದು-ಕೊರತೆ, ದೂರು ವಿಚಾರಣೆ ಹಾಗೂ ಪ್ರಕರಣ ವಿಲೇವಾರಿಯ ಲಕ್ಷ್ಮೇಶ್ವರ ತಾಲೂಕಾ ಮಟ್ಟದ ಜನಸ್ಪಂದನ ಕಾರ್ಯಕ್ರಮದಲ್ಲಿ ಮಾತನಾಡಿದರು.



> ತಾಲೂಕಿನಲ್ಲಿ ಎಲ್ಲ ಇಲಾಖೆಯ ಅಧಿಕಾರಿಗಳು ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಿ ಅವರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಪುರಸಭೆಯಲ್ಲಿ ಮಳೆಗಾಲದಲ್ಲೂ ನೀರಿನ ಸಮಸ್ಯೆ ಸಾಕಷ್ಟಿದ್ದು, ಈ ಬಗ್ಗೆ ನಿರ್ಲಕ್ಷ್ಯ ತೋರುತ್ತಿರುವುದು ಕಂಡು ಬರುತ್ತಿದೆ. ಜನತೆ ನನ್ನಲ್ಲಿ ಅಳಲು ತೋಡಿಕೊಳ್ಳುತ್ತಿದ್ದಾರೆ. ಸಾರ್ವಜನಿಕರಿಗೆ ತೆಊಂದರೆಯಾಗದಂತೆ ಕ್ರಮ ವಹಿಸಿ, ಆಶ್ರಯ ಯೋಜನೆ ಫಲಾನುಭವಿಗಳ ಯಾದಿ ಮರುಪರಿಶೀಲನೆ ನಂತರ ಮತ್ತೆ ಹೊಸಬರಿಗೆ ಅವಕಾಶ ನೀಡಲಾಗುವದು.
>
> – ಡಾ.ಚಂದ್ರು ಲಮಾಣಿ, ಶಾಸಕರು.

ಇಲಾಖೆಗಳಿಗೆ ಸಾರ್ವಜನಿಕರಿಂದ ಬಂದ ಅರ್ಜಿಗಳಿಗೆ ವಿಳಂಬ ಮಾಡದೇ, ಅವರಿಗೆ ಅರ್ಜಿಯ ವಸ್ತುಸ್ಥಿತಿ, ಮಾಹಿತಿ, ಅದು ಇತ್ಯರ್ಥವಾಗುವ ವೇಳೆಯನ್ನು ಸರಿಯಾಗಿ ತಿಳಿಸಿದಲ್ಲಿ ಕಚೇರಿಗಳಿಗೆ ಅಲೆದಾಡುವದು ತಪ್ಪುತ್ತದೆ ಎಂದು ಹೇಳಿದರು.

▶▶3ನೇ ಪುಟಕ್ಕೆ

## ಪ್ರತಿಬಂಧಕಾಜ್ಞೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಗಳು ಜೂನ್ 30 ರಂದು ಜರುಗಲಿವೆ. ಸದರಿ ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಸಲುವಾಗಿ ಜಿಲ್ಲೆಯ 17 ಪರೀಕ್ಷಾ ಕೇಂದ್ರಗಳ 200 ಮೀಟರ್ ಪರಿಮಿತಿಯೊಳಗೆ ಜೂನ್ 30 ರಂದು ಬೆ 8 ರಿಂದ ಸಂಜೆ 5 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು, ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ಹಾಗೂ ಅನಧಿಕೃತ ವ್ಯಕ್ತಿಗಳಿಗೆ ಪರೀಕ್ಷಾ ಕೇಂದ್ರಗಳ ಪ್ರವೇಶವನ್ನು ನಿರ್ಬಂಧಿಸಿದೆ.

ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝರಾಕ್ಸ್ ಅಂಗಡಿ, ಬುಕ್‌ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್, ಕೈ ಗಡಿಯಾರ, ಕ್ಯಾಲ್ಕುಲೇಟರ್, ಬ್ಲೂ ಟೂಥ್ ಹಾಗೂ ಇತರ ಎಲೆಕ್ಟ್ರಾನಿಕ್ಸ್ ಉಪಕರಣಗಳು, ಲಾಂಗ್ ಟೇಬಲ್, ಬಿಳಿ ಬ್ಲೂಯಡ್ ಬೆಂಕಿ ಪೊಟ್ಟಣ ಅಥವಾ ಸಿಗರೇಟ್ ಲೈಟರ್ ಮತ್ತು ಇತರೆ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ.

ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಹಾಗೂ ಹೊರ ಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು, ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ , ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ವೈಶಾಲಿ ಎಂ.ಎಲ್. ಅವರು ಆದೇಶಿಸಿದ್ದಾರೆ.

### ಶಿರಹಟ್ಟಿ ತಾಲೂಕಾ ಮಟ್ಟದ ಜನಸ್ಪಂದನ ಸಭೆಯಲ್ಲಿ ಡಿಸಿ ವೈಶಾಲಿ ಎಂ.ಎಲ್

## ತ್ವರಿತಗತಿಯಲ್ಲಿ ಅರ್ಜಿಗಳ ವಿಲೇವಾರಿ


■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸರಕಾರಿ ಕಚೇರಿಗಳಿಗೆ ಸಾರ್ವಜನಿಕರ ಅಲೆದಾಟ ತಪ್ಪಿಸಿ, ಅವರ ಸಮಸ್ಯೆಗಳನ್ನು ಖುದ್ದಾಗಿ ಆಲಿಸುವದಕ್ಕಾಗಿ ಸಭೆಯನ್ನು ಆಯೋಜಿಸಲಾಗಿದ್ದು, ಇಲ್ಲಿ ಬಂದ ಅರ್ಜಿಗಳನ್ನು ತ್ವರಿತಗತಿಯಲ್ಲಿ ಇತ್ಯರ್ಥಪಡಿಸಲು ಅಗತ್ಯ ಕ್ರಮ ಕೈಕೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಹೇಳಿದರು.

ಅವರು ಬುಧವಾರ ಶಿರಹಟ್ಟಿಯ ತಾ.ಪಂ ಸಭಾಭವನದಲ್ಲಿ ಜರುಗಿದ ತಾಲೂಕಾ ಮಟ್ಟದ ಜನಸ್ಪಂದನ ಸಭೆಯಲ್ಲಿ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿ ಮಾತನಾಡಿದರು.

ಇಂದಿನ ಸಭೆಯಲ್ಲಿ ಬಹುಪಾಲು ರೈತರ ಜಮೀನುಗಳಿಗೆ ತೆರಳುವ ರಸ್ತೆಗಳಿಗೆ ಸಂಬಂಧಿಸಿದ ಅರ್ಜಿಗಳೇ ಇದ್ದು, ಇವುಗಳನ್ನು ಆದಷ್ಟು ಬೇಗನೇ ಇತ್ಯರ್ಥಪಡಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಜಿಲ್ಲಾ ಹಂತದಲ್ಲಿ ಸರಿಯಾಗಬಹುದಾದ ಸಮಸ್ಯೆಗಳಿಗೂ ಸಹ ಪರಿಹಾರ ಕಲ್ಪಿಸಲಾಗುವುದು. ಬೇರೆ ಇಲಾಖೆಗಳಿಗೆ ಬಂದ ಅರ್ಜಿಗಳನ್ನು ವಿಲೇವಾರಿ ಮಾಡಿ ಅವುಗಳ ಇತ್ಯರ್ಥಕ್ಕೂ ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದರು.

ಸಭೆಯಲ್ಲಿ ವಿವಿಧ ಇಲಾಖೆಗಳಲ್ಲಿಯ ಸಮಸ್ಯೆಗಳ ಕುರಿತು 57 ಅರ್ಜಿಗಳು ಸಾರ್ವಜನಿಕರಿಂದ ಸ್ವೀಕೃತವಾದವು. ಪ್ರತ್ಯೇಕವಾಗಿ ಅರ್ಜಿದಾರರನ್ನು ಕರೆಯಿಸಿ ಅವರ ಸಮಸ್ಯೆಯನ್ನು ಸ್ವತಃ ಡಿಸಿ, ಎಸ್‌ಪಿ ಮತ್ತು ಸಿಇಓ ಆಲಿಸಿದರು. ಸಮಸ್ಯೆಗಳಿಗೆ ಸಂಬಂಧಿಸಿದ ಅಧಿಕಾರಿಗಳನ್ನು ಕರೆಯಿಸಿ ಅವರಿಂದ ಅರ್ಜಿದಾರರಿಗೆ ಉತ್ತರವನ್ನು ಕಲ್ಪಿಸಿದರು. ಇದೇ ಸಂದರ್ಭದಲ್ಲಿ ಕಾರ್ಮಿಕ ಇಲಾಖೆಯಿಂದ 20 ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟ್ಯಾಪ್ ವಿತರಣೆ, ಸಾಮಾಜಿಕ ಭದ್ರತಾ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಮಾಸಾಶನದ ಮಂಜೂರಾತಿ ಪತ್ರ ವಿತರಣೆ ಮಾಡಲಾಯಿತು.



ಸಾರ್ವಜನಿಕರ ಸಮಸ್ಯೆಗಳನ್ನು ಪರಿಹರಿಸಲು ಅಧಿಕಾರಿಗಳು ಒಳ್ಳೆಯ ಕೆಲಸ ಮಾಡುತ್ತಿದ್ದಾರೆ. ಇಂದಿನ ಸಭೆಯಲ್ಲಿ ಬಂದ ಅರ್ಜಿಗಳಲ್ಲಿ ಶೇ.70ಕ್ಕೂ ಹೆಚ್ಚು ಸಮಸ್ಯೆಗಳನ್ನು ಸ್ಥಳದಲ್ಲಿಯೇ ಇತ್ಯರ್ಥಪಡಿಸಿದ್ದಾರೆ. ಶಿರಹಟ್ಟಿ-ಮುಂಡರಗಿ-ಲಕ್ಷ್ಮೇಶ್ವರ ತಾಲೂಕುಗಳಲ್ಲಿ ಆಶ್ರಯ ಮನೆ ನಿವೇಶನ ನೀಡುವ ಕುರಿತು ಹೊಸದಾಗಿ ಅರ್ಹ ಫಲಾನುಭವಿಗಳ ಆಯ್ಕೆ ಮಾಡಲು ಸರಕಾರ ನಿರ್ದೇಶಿಸಿದ್ದು, ಅದರಂತೆ ತಹಸೀಲ್ದಾರ ನೇತೃತ್ವದಲ್ಲಿ ಸಮಿತಿ ರಚಿಸಿ, ಆದಷ್ಟು ಬೇಗನೆ ಅರ್ಹ ಫಲಾನುಭವಿಗಳ ಪಟ್ಟಿಯನ್ನು ತಯಾರು ಮಾಡಬೇಕೆಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

> ಸಭೆ ಪ್ರಾರಂಭಕ್ಕೂ ಮುನ್ನ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಸಿಇಓ ಭರತ್ ಪಟ್ಟಣದ ರಾಣಿ ಚನ್ನಮ್ಮ ವಸತಿ ಶಾಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ, ಅವರ ಶೈಕ್ಷಣಿಕ ಗುಣಮಟ್ಟ ಪರೀಕ್ಷೆಗೆ ಕೆಲ ಪ್ರಶ್ನೆಗಳನ್ನು ಕೇಳಿ ಉತ್ತರವನ್ನು ಪಡೆದುಕೊಂಡರು. ನಂತರ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಅಳವಡಿಸಲಾಗಿದ್ದ ಬಯೋಮೆಟ್ರಿಕ್ ಪರಿಶೀಲನೆ ನಡೆಸಿದರು.

ತಹಸೀಲ್ದಾರ ಅನಿಲ ಬಡಿಗೇರ, ಸಿಪಿಐ ನಾಗರಾಜ ಮಾಢಳ್ಳಿ, ಇಓ ಕಲ್ಮನಿ, ಸಮಾಜಕಲ್ಯಾಣಾಧಿಕಾರಿ ಶರಣಯ್ಯ ಹಿರೇಮಠ, ಬಿಸಿಎಂನ ಮರಿಗೌಡ ಸುರಕೋಡ, ಟಿಎಚ್‌ಓ ಡಾ. ಸುಭಾಸ್ ದೈಗೊಂಡ, ಪಿಆರ್‌ಇಡಿ ಎಇಇ ರಾಠೋಡ, ಸಿಡಿಪಿಓ ಮೃತ್ಯುಂಜಯ ಗುಡ್ಡದಾನ್ವೇರಿ, ಬಿಇಓ ನಾಣ್ಕಿನಾಯ್ಕ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

### 'ಮಾದಕ ವ್ಯಸನ ಮತ್ತು ಅಕ್ರಮ ಕಳ್ಳಸಾಗಣೆ ವಿರುದ್ಧದ ಅಂತಾರಾಷ್ಟ್ರೀಯ ದಿನ'ದ ಕಾರ್ಯಕ್ರಮ

## ಯುವಕರು ಮಾದಕ ವ್ಯಸನದಿಂದ ದೂರವಿರಿ



■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ವಿದ್ಯಾರ್ಥಿಗಳ ಕೈಯಲ್ಲಿ ಮುಂದಿನ ದೇಶದ ಭವಿಷ್ಯವಿದೆ. ವಿದ್ಯಾರ್ಥಿಗಳು ಮಾದಕ ವಸ್ತುಗಳ ವ್ಯಸನಕ್ಕೆ ಬಲಿಪಶುವಾಗದೇ ಉತ್ತಮ ಆರೋಗ್ಯದಿಂದ ಜೀವನದಲ್ಲಿ ಸಫಲರಾಗಿ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ ಹೇಳಿದರು.

ನಗರದ ಆದರ್ಶ ವಿದ್ಯಾಸಂಸ್ಥೆಯ ವ್ಹಿ.ಆರ್. ಕುಷ್ಟಗಿ ಮೆಮೋರಿಯಲ್ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗ, ಜಿಲ್ಲಾ ಪೊಲೀಸ್ ಇಲಾಖೆ, ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವ್ಹಿ.ಆರ್. ಕುಷ್ಟಗಿ ಮೆಮೋರಿಯಲ್ ವಾಣಿಜ್ಯ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನಾ ಘಟಕ ಹಾಗು ರೆಡ್ ಕ್ರಾಸ್ ಅವರ ಸಹಯೋಗದಲ್ಲಿ 'ಮಾದಕ ವ್ಯಸನ ಮತ್ತು ಅಕ್ರಮ ಕಳ್ಳಸಾಗಣೆ ವಿರುದ್ಧದ ಅಂತಾರಾಷ್ಟ್ರೀಯ ದಿನ'ದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

> ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾದಕ ವ್ಯಸನ ಮತ್ತು ಅಕ್ರಮ ಕಳ್ಳಸಾಗಣೆ ವಿರುದ್ಧದ ಅಂತಾರಾಷ್ಟ್ರೀಯ ದಿನಾಚರಣೆಯ ಈ ವರ್ಷದ ಘೋಷವಾಕ್ಯವಾದ 'ಸಾಕ್ಷಿಗಳು ಸ್ಪಷ್ಟವಾಗಿವೆ: ತಡೆಗಟ್ಟುವಲ್ಲಿ ಹೂಡಿಕೆ ಮಾಡಿ' ಎಂದು ತಿಳಿಸಿ, ಮಾದಕ ವ್ಯಸನದಿಂದ ದೇಹದ ಅಂಗಾಂಗಗಳು ವಿಫಲಗೊಳ್ಳುತ್ತವೆ. ಹಾಗಾಗಿ ಮಾದಕ ವಸ್ತುಗಳಿಂದ ದೂರವಿರಿ ಎಂದು ವಿದ್ಯಾರ್ಥಿಗಳಿಗೆ ಹೇಳಿದರು.

▶▶3ನೇ ಪುಟಕ್ಕೆ

### ಪಂ.ಪಂಚಾಕ್ಷರಿ ಗವಾಯಿಗಳ, ಪಂ.ಪುಟ್ಟರಾಜ ಕವಿ ಗವಾಯಿಗಳ ಪುಣ್ಯಸ್ಮರಣೆಯಲ್ಲಿ ಸಚಿವ ಎಚ್.ಕೆ. ಪಾಟೀಲ

## ಪುಣ್ಯಾಶ್ರಮ ಮಾನವ ಹಕ್ಕುಗಳನ್ನು ಗೌರವಿಸಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಮಾನವ ಕುಲದಲ್ಲಿ ನಂಬಿಕೆ ಇದ್ದವರಿಗೆ ವೀರೇಶ್ವರ ಪುಣ್ಯಾಶ್ರಮ ಕೈಬೀಸಿ ಕರೆಯುತ್ತದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ ಹೇಳಿದರು.

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಪಂ.ಪಂಚಾಕ್ಷರಿ ಗವಾಯಿಗಳವರ 80ನೇ ಹಾಗೂ ಪಂ.ಪುಟ್ಟರಾಜ ಕವಿ ಗವಾಯಿಗಳವರ 14ನೇ ಪುಣ್ಯಸ್ಮರಣೆಯ ಅಂಗವಾಗಿ ಜರುಗಿದ ಶಿವಾನುಭವಗೋಷ್ಠಿಯಲ್ಲಿ ಅವರು ಮಾತನಾಡಿದರು.

ಸುಮಾರು 50-60 ವರ್ಷಗಳ ನಂತರ ಮಾನವ ಹಕ್ಕುಗಳ ಕಾಯ್ದೆಗಳು ಜಾರಿಗೆ ಬಂದವು. ಆದರೆ, ಇದಕ್ಕೂ ಮುನ್ನ ಉಭಯ ಗುರುಗಳು ವೀರೇಶ್ವರ ಪುಣ್ಯಾಶ್ರಮದಲ್ಲಿ ಅವುಗಳನ್ನು ಅನುಷ್ಠಾನಕ್ಕೆ ತಂದು ಅಂಧರಿಗೆ, ಅನಾಥರಿಗೆ, ನಿರ್ಗತಿಕರಿಗೆ ಶಿಕ್ಷಣ, ಸಂಗೀತ ವಿದ್ಯೆ ನೀಡಿ ಅವರಿಗೆ ಸ್ವಾವಲಂಬಿ ಜೀವನ ರೂಪಿಸಿದ್ದಾರೆ ಎಂದರು.

ಮಾನವ ಹಕ್ಕುಗಳನ್ನು ಗೌರವಿಸುವ ಕೆಲಸ ಪುಣ್ಯಾಶ್ರಮ ಮಾಡಿದೆ. ಪಂ.ಪಂಚಾಕ್ಷರಿ ಗವಾಯಿಗಳವರು ಪುಣ್ಯಾಶ್ರಮವನ್ನು ಕಟ್ಟಿದರೆ, ಪಂ.ಪುಟ್ಟರಾಜ ಗವಾಯಿಗಳವರು ಈ ಆಶ್ರಮವನ್ನು ರಾಷ್ಟಮಟ್ಟದಲ್ಲಿ ಖ್ಯಾತಿ ಗಳಿಸುವಂತೆ ಮಾಡಿದ್ದಾರೆ. ಅದ್ದರಿಂದ ವೀರೇಶ್ವರ ಪುಣ್ಯಾಶ್ರಮ ನಮ್ಮೆಲ್ಲರ ಪುಣ್ಯಕ್ಷೇತ್ರವಾಗಿದೆ. ಅಲ್ಲದೆ, ನಾಡಿನಲ್ಲಿ ಅತೀ ಹೆಚ್ಚು ತುಲಾಭಾರ ಸೇವೆ ನಡೆದಿದ್ದರೆ ಅದು ಪಂ.ಪುಟ್ಟರಾಜ ಗವಾಯಿಗಳವರದ್ದಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.




ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಯಾರು ಸಮಾಜದ ಉದ್ಧಾರಕ್ಕಾಗಿ ಶ್ರಮಿಸುತ್ತಾರೆಯೋ ಅವರನ್ನು ಸಮಾಜವು ಸದಾ ಸ್ಮರಿಸುತ್ತದೆ. ಉಭಯ ಶ್ರೀಗಳು ವಿರೇಶ್ವರ ಪುಣ್ಯಾಶ್ರಮ ನಿರ್ಮಾಣ ಮಾಡಿ ಭಿಕ್ಷಾಟನೆಯಲ್ಲಿ ತೊಡಗ ಬೇಕಾಗಿದ್ದ ಸಾವಿರಾರು ಅಂಧ- ಅನಾಥರಿಗೆ ಸ್ವಾಭಿಮಾನದ ಬದುಕನ್ನು ಕಟ್ಟಿಕೊಟ್ಟಿದ್ದಾರೆ. ಪುಣ್ಯಾಶ್ರಮದ ಅಭಿವೃದ್ಧಿಗಾಗಿ ಪಕ್ಷಾತೀತವಾಗಿ ಎಲ್ಲರೂ ಸಹಾಯ, ಸಹಕಾರ ನೀಡಿದ್ದಾರೆ ಎಂದು ಹೇಳಿದರು.

> ಪಂ. ಪುಟ್ಟರಾಜ ಕವಿ ಗವಾಯಿಗಳಿಗೆ ಈಗಾಗಲೇ ಭಾರತರತ್ನ ಸಿಗಬೇಕಾಗಿತ್ತು ಎನ್ನುವ ಕೊರಗು ನನಗೂ ಇದೆ. ಈ ಬಾರಿ ನಾವೆಲ್ಲರೂ ಕೂಡಿ ಜಿಲ್ಲಾಧಿಕಾರಿಗಳ ಮೂಲಕ ಕೇಂದ್ರ ಸರಕಾರಕ್ಕೆ ಮನವಿ ಸಲ್ಲಿಸೋಣ. ಈ ಬಾರಿ ಗುರುಗಳಿಗೆ ಭಾರತ ರತ್ನ ಸಿಗುತ್ತದೆ ಎನ್ನುವ ಭರಸವೆ ಇದೆ.
>
> – ಎಸ್.ವಿ. ಸಂಕನೂರ. ವಿಪ ಸದಸ್ಯರು.

ಮಾಜಿ ಶಾಸಕ ಬಿ.ಆರ್. ಯಾವಗಲ್ ಮಾತನಾಡಿ, ಅಂಧ-ಅನಾಥರನ್ನು ಸಾಕಿ ಸಲುಹಿ, ಪೋಷಣೆ ಮಾಡಿ ಸಮಾಜಕ್ಕೆ ಕೊಡುಗೆ ನೀಡುತ್ತಿರುವ ಪುಣ್ಯಾಶ್ರಮ ಪುಣ್ಯಕ್ಷೇತ್ರವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗದುಗಿನ ತೋಂಟದಾರ್ಯ ಶ್ರೀಮಠದ ಜ. ತೋಂಟದ ಡಾ. ಸಿದ್ದರಾಮ ಮಾಹಾಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ಧಾರವಾಡ ಮುರಘಾಮಠದ ಮಲ್ಲಿಕಾರ್ಜುನ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸಿದ್ದರು. ಹೂವಿನಶಿಗ್ಲಿ ವಿರಕ್ತಮಠದ ಚನ್ನವೀರ ಸ್ವಾಮಿಗಳು ಸಮ್ಮುಖ ವಹಿಸಿದ್ದರು. ಗುಳೇದಗುಡ್ಡ ಮುರುಘಾಮಠದ ಕಾಶಿನಾಥ ಮಹಾಸ್ವಾಮಿಗಳು, ಎಚ್.ಎಸ್. ವೆಂಕಟಾಪೂರ-ಜಿಗೇರಿಯ ಗುರುಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಸಮ್ಮುಖ ವಹಿಸಿದ್ದರು.

ಈ ಸಂದರ್ಭದಲ್ಲಿ ಪಂ.ಪುಟ್ಟರಾಜ ಕವಿ ಗವಾಯಿಗಳು ರಚಿಸಿದ 'ಭಾವ ಮಂದಾಕಿನಿ' ಗ್ರಂಥ ಹಾಗೂ ಪೂಜ್ಯಶ್ರೀ ಕಲ್ಲಯ್ಯಜ್ಜನವರು ರಚಿಸಿದ 'ಚುಟುಕು ಸಾಹಿತ್ಯ' ಕೃತಿಗಳು ಲೋಕಾರ್ಪಣೆಗೊಂಡವು.

## ಸಂಪಾದಕೀಯ

# ಮಾದಕ ವ್ಯಸನಕ್ಕೆ ಯುವಶಕ್ತಿ ಬಲಿ

ವಿಶ್ವದಾದ್ಯಂತ ಜೂನ್ 26ರಂದು ಮಾದಕ ವಸ್ತು ಮತ್ತು ಮಾನವ ಕಳ್ಳ ಸಾಗಾಣಿಕೆ ವಿರೋಧಿ ದಿನವನ್ನಾಗಿ ಆಚರಿಸಲಾಗುತ್ತಿದೆ. ಮಾದಕ ವಸ್ತುಗಳ ದುಷ್ಪರಿಣಾಮವನ್ನು ಅರಿತು ಕೊಂಡ ವಿಶ್ವ ಸಂಸ್ಥೆ, 1987 ರಲ್ಲಿಯೇ ಮಾದಕ ವಸ್ತು ವಿರೋಧಿ ದಿನವನ್ನು ಆಚರಣೆಗೆ ತಂದಿತು.

ಮದಕ ವಸ್ತುಗಳ ಬಳಕೆಗೆ ಜಗತ್ತಿನ ಎಲ್ಲ ರಾಷ್ಟ್ರಗಳು ಕೈಜೋಡಿಸಿದವು. ಭಾರತ ಸೇರಿದಂತೆ ಮುಂದುವರೆಯುತ್ತಿರುವ ರಾಷ್ಟ್ರಗಳಲ್ಲಿ ಮಾದಕ ವಸ್ತುಗಳ ಬಳಕೆ 90ರ ದಶಕದಲ್ಲಿ ಗಣನೀಯವಾಗಿ ಇತ್ತು. ಆದರೆ ಕಾಲಕ್ರಮೇಣ ಜಾಗೃತಿ ಕಾರ್ಯಕ್ರಮಗಳಿಂದ ಮಾಧಕ ವ್ಯಸನಿಗಳ ಸಂಖ್ಯೆ ಕಡಿಮೆಯಾಯಿತು. ಆದರೆ ಇತ್ತೀಚಿನ ದಿನಗಳಲ್ಲಿ ಪ್ರಸ್ತುತ ಭಾರತದಲ್ಲಿ ಮತ್ತೊಮ್ಮೆ ಮಾದಕ ವಸ್ತುಗಳ ಬಳಕೆ ಮತ್ತು ವ್ಯಸನಿಗಳ ಸಂಖ್ಯೆಯಲ್ಲಿ ಏರಿಕೆ ಕಂಡು ಬಂದಿದೆ.

ಸದ್ಯ ಒಂದು ಅಂದಾಜಿನ ಪ್ರಕಾರ ಭಾರತದಲ್ಲಿ 5 ಕೋಟಿಗಿಂತಲೂ ಹೆಚ್ಚು ಯುವಕರು ಮಾದಕ ವ್ಯಸನಿಗಳಾಗಿದ್ದಾರೆ. ಎಲ್ಲ ವ್ಯಸನಿಗಳ ವಯೋಮಾನ 18ರಿಂದ 35 ವರ್ಷದ ಒಳಗಿರುವುದು ಆತಂಕಕಾರಿ ವಿಷಯ.

ಭಾರತದ ಒಂದು ಬಹುದೊಡ್ಡ ಯುವ ಸಮೂಹ ಇಂಥದೊಂದು ವ್ಯಸನಕ್ಕೆ ಬಲಿಯಾಗುತ್ತಿರುವುದು ನೋಡಿದರೆ, ಭವಿಷ್ಯದ ದಿನಗಳು ಮತ್ತಷ್ಟು ಭಯಾನಕವಾಗುವ ಸೂಚನೆಗಳಾಗಿವೆ.

ಮಾದಕ ವಸ್ತು ನಿಷೇಧಕ್ಕೆ ಹಲವಾರು ಕಾನೂನುಗಳಿವೆ. ಆದರೂ ಬೇರೆ ಬೇರೆ ಮೂಲಗಳಿಂದ ಮಾದಕ ವಸ್ತುಗಳು ಯುವಕರಿಗೆ ಸುಲಭವಾಗಿ ದೊರೆಯುವಂತಾಗಿವೆ. ಮಾದಕ ವಸ್ತುಗಳ ಎಷ್ಟು ರೂಪದಲ್ಲಿವೆ ಎನ್ನುವುದರ ಬಗ್ಗೆ ವ್ಯವಸ್ಥಿತ ಅಧ್ಯಯನ ನಡೆಯಬೇಕು. ಆನಂತರ ಅವುಗಳ ನಿಯಂತ್ರಣಕ್ಕೆ ಮಾರ್ಗೋಪಾಯಗಳನ್ನ ಕಂಡುಕೊಂಡರೆ ಮಾತ್ರ, ಮಾದಕ ವಸ್ತುಗಳಿಂದ ಭಾರತವನ್ನು ಮುಕ್ತವಾಗಿಸಲು ಸಾಧ್ಯ.

## ಸ್ತ್ರೀಯರ ಸ್ವಾವಲಂಬಿ ಜೀವನಕ್ಕೆ ನೆರವು । ನೇರವಾಗಿ ಬ್ಯಾಂಕ್ ಖಾತೆಗೆ ಕೂಲಿ ಜಮೆ

# ಮಹಿಳಾ ಸಬಲೀಕರಣಕ್ಕೆ 'ಉದ್ಯೋಗ ಖಾತ್ರಿ' ಬಲ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ನಡೆಯುವ ಕಾಮಗಾರಿಗಳಲ್ಲಿ ಮಹಿಳಾ ಕಾರ್ಮಿಕರ ಪಾಲ್ಗೊಳ್ಳುವಿಕೆ ಶೇಕಡಾ 50.15ಕ್ಕೆ ಹೆಚ್ಚಿಸುವಲ್ಲಿ ಲಕ್ಷ್ಮೇಶ್ವರ ತಾಲೂಕು ಪಂಚಾಯಿತಿ ಯಶಸ್ವಿಯಾಗಿದೆ.

ಮಹಿಳೆಯರಲ್ಲಿ ಸ್ವಾವಲಂಬಿ ಮನೋಭಾವ ಬೆಳೆಸುವ ನಿಟ್ಟಿನಲ್ಲಿ ತಾಲೂಕು ಪಂಚಾಯಿತಿ ವತಿಯಿಂದ ಕೈಗೊಳ್ಳಲಾದ ವಿಶೇಷ ಮುತುವರ್ಜಿ ಮೆಚ್ಚುಗೆಗೆ ಪಾತ್ರವಾಗಿದೆ. ಖಾಸಗಿ ಕಾಮಗಾರಿ ಸೇರಿದಂತೆ ಇತರೆಡೆ ಮಹಿಳೆಯರು ದುಡಿದರೆ ನೀಡುವ ವೇತನದಲ್ಲಿ ತಾರತಮ್ಯವಿದೆ. ಪುರುಷರಿಗೆ ಕೊಡುವಷ್ಟು ಕೂಲಿ ಹಣವನ್ನು ಮಹಿಳಾ ಕಾರ್ಮಿಕರಿಗೆ ನೀಡುವುದಿಲ್ಲ. ಆದರೆ, ನರೇಗಾದಡಿ ಸಮಾನ ಕೂಲಿ ನಿಯಮವಿದೆ. ಹೀಗಿದ್ದರೂ ನರೇಗಾ ಯೋಜನೆಯ ಕಾಮಗಾರಿಗಳಲ್ಲಿ ಮಹಿಳಾ ಕಾರ್ಮಿಕರ ಪಾಲ್ಗೊಳ್ಳುವಿಕೆ ಕಡಿಮೆ. ಇದನ್ನು ಮನಗಂಡ ತಾಲೂಕು ಪಂಚಾಯಿತಿ ಕಾರ್ಯನಿರ್ವಹಕ ಅಧಿಕಾರಿ ಕೃಷ್ಣಪ್ಪ ಧರ್ಮರ ಅವರು, ಮಹಿಳೆಯರಿಗೆ ಹೆಚ್ಚು ಹೆಚ್ಚು ಉದ್ಯೋಗ ಖಾತ್ರಿ ಕೆಲಸದಲ್ಲಿ ತೊಡಗಿಸಲು ಎಲ್ಲ ಪಿಡಿಓ ಮತ್ತು ಪಂಚಾಯಿತಿ ಸಿಬ್ಬಂದಿಗೆ ನಿರ್ದೇಶನ ನೀಡಿದ ಪರಿಣಾಮ ತಾಲೂಕಿನಲ್ಲಿ ಮಹಿಳಾ ಕೆಲಸಗಾರರ ಪ್ರಮಾಣ ಹೆಚ್ಚಿದೆ.

ನರೇಗಾ ಕೇಂದ್ರ ಸರಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿದೆ. ಗ್ರಾಮಾಭಿವೃದ್ಧಿ ಹಾಗೂ ಕಾರ್ಮಿಕರಿಗೆ ಉದ್ಯೋಗ ಕಲ್ಪಿಸುವುದು ಯೋಜನೆಯ ಉದ್ದೇಶ. ಹೀಗಾಗಿ ಪುರುಷ, ಮಹಿಳೆ ಎಂಬ ತಾರತಮ್ಯ ಇಲ್ಲದೆ ಪ್ರತಿ ಕುಟುಂಬಕ್ಕೆ 100 ದಿನ ಉದ್ಯೋಗ ಪಡೆಯಬಹುದಾಗಿದೆ. ಯೋಜನೆಯಡಿ ಒಂದು ದಿನದ ಕೂಲಿ ಹಣವಾಗಿ 349 ರೂ.ಗಳನ್ನು ನೀಡಲಾಗುತ್ತಿದೆ.

ಸಮಾನ ವೇತನ ನೀತಿ, ನೇರವಾಗಿ ಬ್ಯಾಂಕ್ ಖಾತೆಗೆ ಹಣ ಸಂದಾಯ ಇದ್ದರೂ ಯೋಜನೆಯ ಕಾಮಗಾರಿಗಳಲ್ಲಿ ಮಹಿಳಾ ಕಾರ್ಮಿಕರ ಪಾಲ್ಗೊಳ್ಳುವಿಕೆ ಕಡಿಮೆ ಇತ್ತು. ಪುರುಷರ ಕಾರ್ಮಿಕರಿಗೆ ಹೋಲಿಕೆ ಮಾಡಿದರೆ ಮಹಿಳೆಯರ ಪಾಲ್ಗೊಳ್ಳುವಿಕೆ ಶೇ. 46–47ರಷ್ಟು ಮಾತ್ರ ಇತ್ತು. ಉದ್ಯೋಗ ಖಾತ್ರಿಯತ್ತ ಮಹಿಳೆಯರನ್ನು ಸೆಳೆಯುವ ತಾ.ಪಂ ಉದ್ದೇಶ ಸಾಕಾರವಾಗಿದೆ.

ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು, ತಾಲೂಕು ಮಟ್ಟದ ಅಧಿಕಾರಿಗಳು, ಗ್ರಾ.ಪಂ ಗಣಕಯಂತ್ರ ನಿರ್ವಾಹಕರು, ಗ್ರಾಮ ಕಾಯಕ ಮಿತ್ರರು ಒಟ್ಟುಗೂಡಿ ಗ್ರಾಮಗಳಲ್ಲಿಯ ಮಹಿಳಾ ಸ್ವಸಹಾಯ ಗುಂಪುಗಳ ಸಹಯೋಗದಲ್ಲಿ ಸಭೆ ಜರುಗಿಸಿ, ಉದ್ಯೋಗ ಖಾತ್ರಿಯ ಉದ್ದೇಶ ಮತ್ತು ಮಹತ್ವದ ಬಗ್ಗೆ ಮನವರಿಕೆ ಮಾಡಿಕೊಟ್ಟಿದ್ದಾರೆ.

ಆ ಮೂಲಕ ಸಮುದಾಯ ಕಾಮಗಾರಿಗಳತ್ತ ಮಹಿಳೆಯರನ್ನು ಸೆಳೆಯುವ ಕಾರ್ಯವನ್ನು ಆರಂಭಿಸಲಾಯಿತು. ಕೆಲವು ಗ್ರಾಮಗಳಲ್ಲಿ ಮಹಿಳೆಯರಿಗೆ ಪ್ರತ್ಯೇಕ ಕೆಲಸ ಹಂಚಿಕೆ ಮಾಡಿಕೊಡಲಾಗಿದೆ. ತಾಲೂಕಿನ ಒಟ್ಟು ಮಹಿಳಾ ಪಾಲ್ಗೊಳ್ಳುವಿಕೆ ಪ್ರಮಾಣ ಶೇ. 50.15ರಷ್ಟಿದೆ. ಶಿಗ್ಲಿ ಗ್ರಾ.ಪಂ ಶೇ. 55.99, ಆದರಹಳ್ಳಿ ಶೇ. 54.74, ಯಳವತ್ತಿ ಶೇ. 53.76, ಬಾಲೆಹೊಸೂರ ಶೇ. 50.95, ಗೋವನಾಳ ಗ್ರಾ.ಪಂ ಶೇ. 50.04ರಷ್ಟು ಮಹಿಳಾ ಪಾಲ್ಗೊಳ್ಳುವಿಕೆ ಇದ್ದು, ಮಾಢಳ್ಳಿ ಗ್ರಾ.ಪಂ ಶೇ.43ರಷ್ಟಿದೆ. ಇನ್ನುಳಿದ ಪಂಚಾಯತಿಗಳು ಶೇ.50ಕ್ಕೆ ಸಮೀಪದಲ್ಲಿವೆ.

> ಖಾಸಗಿ ಕಾಮಗಾರಿಗಳಲ್ಲಿ ದುಡಿಯುವ ಮಹಿಳೆಯರಿಗೆ ಈ ಭಾಗದಲ್ಲಿ ಪುರುಷರಿಗೆ ನೀಡುವಷ್ಟು ಕೂಲಿ ನೀಡಲಾಗುವುದಿಲ್ಲ. ಆದರೆ, ನರೇಗಾದಡಿ ದುಡಿದರೆ ಸಮಾನ ವೇತನ ಸಿಗಲಿದೆ. ಆದರೂ ಹೆಚ್ಚು ಮಹಿಳೆಯರು ನರೇಗಾದಡಿ ದುಡಿಯಲು ಮುಂದೆ ಬರುತ್ತಿರಲಿಲ್ಲ. ಹಾಗಾಗಿ ಅವರಲ್ಲಿ ಯೋಜನೆ ಬಗ್ಗೆ ಅರಿವು ಮೂಡಿಸಿ, ಇತ್ತ ಸೆಳೆಯಲು ಯಶಸ್ವಿಯಾಗಿದ್ದೇವೆ. ವೈಯಕ್ತಿಕ ಕಾಮಗಾರಿಗಳಲ್ಲಿ ಹೆಚ್ಚು ಮಹಿಳೆಯರನ್ನು ತೊಡಗಿಸಲು ಕ್ರಮ ಕೈಗೊಳ್ಳಲಾಗುವುದು.
>
> –ಕೃಷ್ಣಪ್ಪ ಧರ್ಮರ.
> ತಾ.ಪಂ ಕಾರ್ಯನಿರ್ವಹಕ ಅಧಿಕಾರಿ.



# ಲೋಕಸಭೆಯ ಸ್ಪೀಕರ್ ಆಗಿ ಓಂ ಬಿರ್ಲಾ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಬಿಜೆಪಿ ಸಂಸದ ಓಂ ಬಿರ್ಲಾ ಅವರು ಮತ್ತೊಮ್ಮೆ ಲೋಕಸಭೆಯ ಸ್ಪೀಕರ್ ಆಗಿ ಆಯ್ಕೆಯಾಗಿದ್ದಾರೆ. ಈ ಮೂಲಕ ಆಡಳಿತ ಕೂಟ ಎನ್‌ಡಿಎ ಸ್ಪೀಕರ್ ಸ್ಥಾನವನ್ನು ಉಳಿಸಿಕೊಳ್ಳುವಲ್ಲಿ ಯಶಸ್ವಿಯಾಗಿದೆ.

ಗೆಲುವಿನ ನಂತರ, ಓಂ ಬಿರ್ಲಾ ಅವರನ್ನು ಪ್ರಧಾನಿ ನರೇಂದ್ರ ಮೋದಿ ಮತ್ತು ಪ್ರತಿಪಕ್ಷ ನಾಯಕನ ಸ್ಥಾನಕ್ಕೆ ನಾಮ ನಿರ್ದೇಶಿತರಾಗಿರುವ ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಅಭಿನಂದಿಸಿದರು. ಇಬ್ಬರೂ ನಾಯಕರು ಸ್ಪೀಕರ್ ಅನ್ನು ಅವರ ಪೀಠಕ್ಕೆ ಕರೆದೊಯ್ದರು.

" ಈ ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಸ್ಪೀಕರ್ ಆಗಿದ್ದ ಬಿರ್ಲಾ ಅವರ ಅನುಭವವು ದೇಶಕ್ಕೆ ಮತ್ತಷ್ಟು ಮಾರ್ಗದರ್ಶನ ನೀಡಲು ಸಹಾಯ ಮಾಡಲಿದೆ" ಎಂದು ಪ್ರಧಾನಿ ಮೋದಿ ಹೇಳಿದರು.

ಸುಮಾರು 50 ವರ್ಷಗಳ ಬಳಿಕ ಸ್ಪೀಕರ್ ಹುದ್ದೆಗೆ ಇಂದು (ಜೂನ್ 26) ಚುನಾವಣೆ ನಡೆಯಿತು. ಆಡಳಿತ ಪಕ್ಷ ಸ್ಪೀಕರ್ ಸ್ಥಾನ ಪಡೆದರೆ, ಪ್ರತಿಪಕ್ಷಕ್ಕೆ ಉಪ ಸ್ಪೀಕರ್ ಸ್ಥಾನ ಬಿಟ್ಟು ಕೊಡುವುದು ಸಂಪ್ರದಾಯವಾಗಿತ್ತು. ಆದರೆ, ಈ ಬಾರಿ ಆಡಳಿತ ಪಕ್ಷ ಎನ್‌ಡಿಎ ಉಪ ಸ್ಪೀಕರ್ ಸ್ಥಾನ ಬಿಟ್ಟು ಕೊಡದ ಹಿನ್ನೆಲೆ, ಪ್ರತಿಪಕ್ಷ ಇಂಡಿಯಾ ಕೂಟ ಕೇರಳದ ಕಾಂಗ್ರೆಸ್ ಸಂಸದ ಕೋಡಿಕುನ್ನಿಲ್ ಸುರೇಶ್ ಅವರನ್ನು ಅಭ್ಯರ್ಥಿಯಾಗಿ ಕಣಕ್ಕಿಳಿಸಿತ್ತು.

# "ಪ್ರತಿ ಪಕ್ಷಗಳ ಧ್ವನಿಯನ್ನು ಹತ್ತಿಕ್ಕುವುದಿಲ್ಲ ಎಂಬ ನಿರೀಕ್ಷೆಯಿದೆ"



■ ವಿಜಯಸಾಕ್ಷಿ ಸುದ್ದಿ, ನವದೆಹಲಿ

18ನೇ ಲೋಕಸಭೆಯ ಸ್ಪೀಕರ್ ಆಗಿ ಆಯ್ಕೆಯಾಗಿರುವ ಓಂ ಬಿರ್ಲಾ ಅವರನ್ನು ಅಭಿನಂದಿಸಿರುವ ರಾಹುಲ್ ಗಾಂಧಿ, "ಪ್ರತಿಪಕ್ಷಗಳಿಗೆ ಮಾತನಾಡಲು ಅವಕಾಶ ಮಾಡಿಕೊಡಬೇಕು ಮತ್ತು ಭಾರತದ ಸಂವಿಧಾನವನ್ನು ರಕ್ಷಿಸುವ ಕರ್ತವ್ಯವನ್ನು ನಿರ್ವಹಿಸಬೇಕು" ಎಂದು ಒತ್ತಾಯಿಸಿದರು.

ರಾಹುಲ್ ಗಾಂಧಿಯ ಆಶಯಗಳನ್ನೇ ಪುನರುಚ್ಚರಿಸಿದ ಇಂಡಿಯಾ ಮೈತ್ರಿಕೂಟದ ಪ್ರಮುಖ ಪಕ್ಷ ಸಮಾಜವಾದಿಯ ಮುಖ್ಯಸ್ಥ ಅಖಿಲೇಶ್ ಯಾದವ್ " ತಾವು ಪ್ರತಿಕ್ಷಗಳ ಧ್ವನಿಯನ್ನು ಹತ್ತಿಕ್ಕಿವುದಿಲ್ಲ ಎಂಬ ನಿರೀಕ್ಷೆಯಿದೆ" ಎಂದಿದ್ದಾರೆ.

"ಪ್ರತಿ ಪಕ್ಷಗಳು ನೀವು ನಿಮ್ಮ ಕೆಲಸವನ್ನು ಸಮರ್ಥವಾಗಿ ಮುಂದುವರಿಸಬೇಕು ಮತ್ತು ಸದನ ಉತ್ತಮವಾಗಿ ಕಾರ್ಯನಿರ್ವಹಿಸ ಬೇಕೆಂದು ಬಯಸುತ್ತದೆ. ಸಹಕಾರ, ನಂಬಿಕೆಯ ಆಧಾರದ ಮೇಲೆ ಸದನ ನಡೆಯುವುದು ಬಹಳ ಮುಖ್ಯ" ಎಂದು ರಾಹುಲ್ ಹೇಳಿದರು.

"ಸದನವು ಜನರ ಧ್ವನಿಯನ್ನು ಪ್ರತಿನಿಧಿಸುತ್ತದೆ. ನೀವು ಆ ಧ್ವನಿಯ ಅಂತಿಮ ತೀರ್ಪುಗಾರರು. ಸಹಜವಾಗಿ, ಸರ್ಕಾರಕ್ಕೆ ಅಧಿಕಾರವಿದೆ. ಆದರೆ, ವಿರೋಧ ಪಕ್ಷವೂ ಭಾರತದ ಧ್ವನಿಯನ್ನು ಪ್ರತಿನಿಧಿಸುತ್ತದೆ. ವಿರೋಧ ಪಕ್ಷದ ಧ್ವನಿಯನ್ನು ಈ ಸದನದಲ್ಲಿ ಪ್ರತಿನಿಧಿಸಲು ಅನುಮತಿಸುವುದು ಬಹಳ ಮುಖ್ಯ. ಸದನ ಎಷ್ಟು ಸಮರ್ಥವಾಗಿ ನಡೆಯುತ್ತದೆ ಎಂಬುವುದು ಪ್ರಶ್ನೆಯಲ್ಲ. ಈ ಸದನದಲ್ಲಿ ಭಾರತದ ಧ್ವನಿಯನ್ನು ಕೇಳಲು ಎಷ್ಟು ಅನುಮತಿಸಲಾಗಿದೆ ಎಂಬುವುದು ಮುಖ್ಯ" ಎಂದರು.

ರಾಹುಲ್ ಗಾಂಧಿಯ ಬಳಿಕ ಸದನವನ್ನು ಉದ್ದೇಶಿಸಿ ಮಾತನಾಡಿದ ಅಖಿಲೇಶ್ ಯಾದವ್ "ವಿರೋಧ ಪಕ್ಷದ ಧ್ವನಿಯನ್ನು ನೀವು ಹತ್ತಿಕ್ಕುವುದಿಲ್ಲ, ಇನ್ನು ಮುಂದೆ ಯಾವುದೇ ಉಚ್ಚಾಟನೆಗಳು ಇರುವುದಿಲ್ಲ ಎಂದು ನಾವು ನಿರೀಕ್ಷಿಸುತ್ತೇವೆ" ಎಂದು ಹೇಳಿದರು.

# ಐತಿಹಾಸಿಕ ಸ್ಥಳಗಳ ಅಧ್ಯಯನ ಮಾಡಿ

■ ವಿಜಯಸಾಕ್ಷಿ ಸುದ್ದಿ, ಗದಗ



ಇತಿಹಾಸದ ಅದ್ಯಯನದಿಂದ ನಮ್ಮ ದೇಶದ ಗಣಿತಶಾಸ್ತ್ರ, ವಿಜ್ಞಾನಶಾಸ್ತ್ರ, ಖಗೋಳಶಾಸ್ತ್ರ, ಭೂಗೋಳಶಾಸ್ತ್ರದಲ್ಲಿ ಎಷ್ಟು ಅಗಾಧವಾದ ಜ್ಞಾನ ಹೊಂದಿದ್ದರು ಎಂಬುದನ್ನು ಮಂದಿರದ ವಾಸ್ತುಶಿಲ್ಪ ಕಲೆಯ ಮೂಲಕ ತಿಳಿಯಬಹುದು ಎಂದು ಪ್ರೊ. ಗಣೇಶ ಚಲವಾದಿ ಹೇಳಿದರು.

ಅವರು ವಿಜಯ ವಾಣಿಜ್ಯ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಗೆ ಇತಿಹಾಸ ಕ್ಷೇತ್ರಗಳ ಅಧ್ಯಯನಕ್ಕಾಗಿ ಲಕ್ಕುಂಡಿಯ ಜೈನ್ ದೇವಾಲಯಕ್ಕೆ ಭೇಟಿ ನೀಡಿದಾಗ ಇತಿಹಾಸ ಪರಿಚಯಿಸಿ ಮಾತನಾಡಿದರು.

ಲಕ್ಕುಂಡಿಯ ಗ್ರೇಟರ್ ಜೈನ್ ದೇವಾಲಯ 11ನೇ ಶತಮಾನದ ಆರಂಭಿಕ ಮಹಾವೀರ ದೇವಾಲಯವಾಗಿದೆ. ವಾಸ್ತುಶಿಲ್ಪಗಳು ಚಾಲುಕ್ಯರ ಕಾಲದ ವೈಭವವನ್ನು ಪ್ರತಿಬಿಂಬಿಸುತ್ತವೆ. ಆಗಿನ ಕಾಲದ ಶಿಲ್ಪಿಗಳಿಗೆ ವಾಸ್ತುಶಾಸ್ತ್ರದ ಬಗ್ಗೆ ಅಂದರೆ ಇಂದಿನ ಇಂಜಿನಿಯರಿಂಗ್ ಕುರಿತು ಅಗಾಧ ಜ್ಞಾನವಿತ್ತು. ಆದ್ದರಿಂದ ವಿದ್ಯಾರ್ಥಿಗಳು ಐತಿಹಾಸಿಕ ಸ್ಥಳಗಳಿಗೆ ಭೇಟಿ ನೀಡಿದಾಗ ಆ ಸ್ಥಳದ ಬಗ್ಗೆ ಅಧ್ಯಯನ ಮಾಡಬೇಕು ಎಂದು ತಿಳಿಸಿದರು.

ಸಂಸ್ಥೆಯ ಅಧ್ಯಕ್ಷ ಅಶೋಕ ಅಕ್ಕಿ ಮಾತನಾಡಿ, ಈ ಕ್ಷೇತ್ರ ಅಧ್ಯಯನದಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಜೀವನದಲ್ಲಿ ಆಸಕ್ತಿ, ಉಲ್ಲಾಸ ಹಾಗೂ ಶಿಸ್ತಿನೊಂದಿಗೆ ಗುರಿ ಸಾಧನೆಗೆ ಪ್ರೇರಣಯಾಗಬಹುದು ಎಂಬ ವಿಚಾರದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪ್ರೊ. ಶ್ರೀದೇವಿ ವಿ.ವಾಯ್, ಪುರಾತತ್ವ ಇಲಾಖೆಯ ಸಿಬ್ಬಂದಿ, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# 'ಈ ಪಾದ ಪುಣ್ಯ ಪಾದ' ಟೈಟಲ್ ಬಿಡುಗಡೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು




ಪೂರ್ಣಚಂದ್ರ ಫಿಲಂಸ್ ಲಾಂಛನದಲ್ಲಿ ಮೂಡಿಬರುತ್ತಿರುವ 'ಈ ಪಾದ ಪುಣ್ಯ ಪಾದ' ಎಂಬ ಚಲನಚಿತ್ರದ ಟೈಟಲನ್ನು ಖ್ಯಾತ ಚಲನಚಿತ್ರ ನಿರ್ದೇಶಕ ಶಶಾಂಕ್ ಬಿಡುಗಡೆ ಮಾಡಿ ಚಿತ್ರ ತಂಡಕ್ಕೆ ಶುಭ ಕೋರಿದರು.

ಸಿದ್ದು ಪೂರ್ಣಚಂದ್ರ ಈ ಚಿತ್ರಕ್ಕೆ ಕಥೆ, ಚಿತ್ರಕತೆ, ಸಂಭಾಷಣೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. ಮುಖ್ಯಪಾತ್ರದಲ್ಲಿ ಆಟೋ ನಾಗರಾಜ್, ಮಮತಾ ರಾಹುತ್, ಪ್ರಭಾಕರ್ ಬೋರೇಗೌಡ, ಪ್ರಮಿಳಾ ಸುಬ್ರಹ್ಮಣ್ಯಂ, ಹರೀಶ್ ಕುಂದೂರ್, ಸನ್ನಿ ಇನ್ನೂ ಮುಂತಾದವರ ತಾರಾಗಣವಿದೆ. ಛಾಯಾಗ್ರಹಣ ರಾಜು ಹೆಮ್ಮಿಗೆಪುರ, ಸಂಗೀತ ಅನಂತ್ ಆರ್ಯನ್, ಸಂಕಲನ ದೀಪಕ್, ವಸ್ತ್ರ ವಿನ್ಯಾಸ ನಾಗರತ್ನ ಕೆ.ಹೆಚ್, ಪ್ರೊಡಕ್ಷನ್ ಡಿಸೈನ್ ದಿಲೀಪ್ ಹೆಚ್.ಆರ್, ಕಾರ್ಯಕಾರಿ ನಿರ್ಮಾಪಕರು ಪುಟ್ಟರಾಜು ಎ.ಕೆ. ಆಲಗೌಡನ ಹಳ್ಳಿ, ಕಲಾ ನಿರ್ದೇಶನ ಬಸವರಾಜ್ ಆಚಾರ್, ಪಿಆರ್‌ಓ ಸುಧೀಂದ್ರ ವೆಂಕಟೇಶ, ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಆಗಸ್ಟ್ ಮೊದಲ ವಾರದಲ್ಲಿ ಚಿತ್ರೀಕರಣ ಪ್ರಾರಂಭವಾಗಲಿದೆ. ಬೆಂಗಳೂರು, ರಾಮನಗರ, ಚನ್ನಪಟ್ಟಣ ಮತ್ತು ಸುತ್ತಮುತ್ತ ಹಳ್ಳಿಗಳಲ್ಲಿ ಚಿತ್ರೀಕರಣವಾಗುತ್ತದೆ ಎಂದು ನಿರ್ದೇಶಕ ಸಿದ್ದು ಪೂರ್ಣಚಂದ್ರ ತಿಳಿಸಿದ್ದಾರೆ.

# ದೆಹಲಿ ಅಬಕಾರಿ ನೀತಿ ಪ್ರಕರಣ : ಕೇಜ್ರಿವಾಲ್‌ರನ್ನು ಬಂಧಿಸಿದ ಸಿಬಿಐ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ



ಆಪಾದಿತ ಅಬಕಾರಿ ನೀತಿ ಹಗರಣ ಪ್ರಕರಣಕ್ಕೆ ಸಂಬಂಧಿಸಿದಂತೆ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರನ್ನು ಸಿಬಿಐ ಬುಧವಾರ (ಜೂನ್ 26) ಅಧಿಕೃತವಾಗಿ ಬಂಧಿಸಿದೆ.

ತನಿಖೆ ನಡೆಸಲು ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಅಮಿತಾಭ್ ರಾವತ್ ಅವರು ಅನುಮತಿ ನೀಡಿದ ಹಿನ್ನೆಲೆ, ಕೇಜ್ರಿವಾಲ್ ಅವರನ್ನು ಸಿಬಿಐ ಔಪಚಾರಿಕವಾಗಿ ಬಂಧಿಸಿತು.

ಕೇಜ್ರಿವಾಲ್ ಅವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲು ಸಿಬಿಐ ಸಲ್ಲಿಸಿದ ಮನವಿ ಮತ್ತು ಜೂನ್ 24 ರಂದು ತಿಹಾರ್ ಜೈಲಿನಲ್ಲಿ ತನಿಖೆಗೊಳಪಡಿಸಲು ತಾನು ಸಿಬಿಐಗೆ ನೀಡಿದ ಆದೇಶದ ಪ್ರತಿಗಳನ್ನು ಕೇಜ್ರಿವಾಲ್ ಅವರಿಗೆ ನೀಡಬೇಕು ಎಂದು ನ್ಯಾಯಾಲಯ ಸೂಚಿಸಿದೆ.

ದೆಹಲಿಯ ಲೆಫ್ಟಿನೆಂಟ್ ಗವರ್ನರ್ ವಿ .ಕೆ ಸಕ್ಸೇನಾ ಅವರು ಜುಲೈ 20, 2022 ರಂದು ನೀಡಿದ್ದ ದೂರಿನ ಮೇರೆಗೆ ಸಿಬಿಐ ಪ್ರಕರಣ ದಾಖಲಿಸಿಕೊಂಡಿತ್ತು.

ಜೂನ್ 25ರಂದು ಅರವಿಂದ್ ಕೇಜ್ರಿವಾಲ್ ಅವರ ಹೇಳಿಕೆಯನ್ನು ಜೈಲಿನಿಂದ ಪಡೆದಿದ್ದ ಸಿಬಿಐ, ಇಂದು ವಿಚಾರಣಾ ನ್ಯಾಯಾಲಯದ ಮುಂದೆ ಅವರನ್ನು ಹಾಜರುಪಡಿಸಲು ಅನುಮತಿ ಕೋರಿತ್ತು.

ನ್ಯಾಯಾಲಯಕ್ಕೆ ಸಿಬಿಐ ಅರ್ಜಿ ಸಲ್ಲಿಸುವ ಬಗ್ಗೆ ಮತ್ತು ಅವರನ್ನು ಪ್ರಶ್ನಿಸಲು ಆದೇಶ ಪಡೆಯುವ ಬಗ್ಗೆ ತನಗೆ ಮಾಹಿತಿ ನೀಡಿಲ್ಲ. ಈ ವಿಚಾರ ಮಾಧ್ಯಮಗಳಿಂದ ಗೊತ್ತಾಗಿದೆ ಎಂದು ಕೇಜ್ರಿವಾಲ್ ಪರ ವಕೀಲ ವಿವೇಕ್ ಜೈನ್ ಹೇಳಿದ್ದಾರೆ. "ಸಿಬಿಐ ಕ್ರಮ ಕಳವಳಕಾರಿಯಾಗಿದ್ದು ಈ ಕುರಿತ ದಾಖಲೆಗಳನ್ನು ಅಧ್ಯಯನ ಮಾಡಲು ನ್ಯಾಯಾಲಯ ಅವಕಾಶ ಮಾಡಿಕೊಡಬೇಕು. ವಿಚಾರಣೆಯನ್ನು ನಾಳೆಗೆ ಮುಂದೂಡಿ" ಎಂದು ಕೇಜ್ರಿವಾಲ್ ಪರ ಹಾಜರಾದ ಮತ್ತೊಬ್ಬ ಹಿರಿಯ ವಕೀಲ ವಿಕ್ರಮ್ ಚೌಧರಿ ಆಗ್ರಹಿಸಿದ್ದಾರೆ.

ಆದರೆ, ತನಿಖೆ ನಡೆಸುವುದು ತನ್ನ ಪರಮಾಧಿಕಾರವಾಗಿದ್ದು, ಆರೋಪಿಗಳಿಗೆ ಮಾಹಿತಿ ನೀಡಬೇಕೆಂಬ ಕಾನೂನು ಇಲ್ಲ ಎಂದು ಸಿಬಿಐ ಸಮರ್ಥಿಸಿಕೊಂಡಿದೆ.

ಸಿಬಿಐ ಪರ ವಕೀಲರು ಬಂಧನ ಕುರಿತಂತೆ ತಮ್ಮ ಬಳಿ ಇರುವ ದಾಖಲೆಗಳನ್ನು ಸಲ್ಲಿಸುವುದಾಗಿ ತಿಳಿಸಿದ್ದು, ನಂತರ ಕೇಜ್ರಿವಾಲ್ ಪರ ವಕೀಲರ ವಾದ ಆಲಿಸುವುದಾಗಿ ಸ್ಪಷ್ಟಪಡಿಸಿದ ನ್ಯಾಯಾಲಯ, ದಾಖಲೆಗಳನ್ನು ಒದಗಿಸುವುದರ ಜೊತೆಗೆ ಆದೇಶ ನೀಡುವುದಾಗಿ ತಿಳಿಸಿದೆ.

# ಗೌರಿ ಹತ್ಯೆ ಪ್ರಕರಣ : ಮೂವರು ಆರೋಪಿಗಳ ಜಾಮೀನು ಅರ್ಜಿ ಆದೇಶ ಕಾಯ್ದಿರಿಸಿದ ಹೈಕೋರ್ಟ್

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಪತ್ರಕರ್ತೆ ಗೌರಿ ಲಂಕೇಶ್ ಹತ್ಯೆ ಪ್ರಕರಣದ ಐದನೇ ಆರೋಪಿ ಅಮಿತ್ ದಿಗ್ವೇಕರ್, ಏಳನೇ ಆರೋಪಿ ಸುರೇಶ್ ಹೆಚ್.ಎಲ್ ಮತ್ತು 17ನೇ ಆರೋಪಿ ಕೆ.ಟಿ ನವೀನ್ ಕುಮಾರ್ ಸಲ್ಲಿಸಿರುವ ಪ್ರತ್ಯೇಕ ಜಾಮೀನು ಅರ್ಜಿಗಳ ಸುದೀರ್ಘ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಸ್.ವಿಶ್ವಜಿತ್ ಶೆಟ್ಟಿ ಅವರ ಹೈಕೋರ್ಟ್ ಏಕಸದಸ್ಯ ಪೀಠ ಆದೇಶ ಕಾಯ್ದಿರಿಸಿದೆ.

ಪ್ರಕರಣದ 11ನೇ ಆರೋಪಿ ಮೋಹನ್ ನಾಯಕ್‌ಗೆ ಹೈಕೋರ್ಟ್ ಜಾಮೀನು ಮಂಜೂರು ಮಾಡಿರುವುದನ್ನು ಪರಿಗಣಿಸಿ ತಮಗೂ ಜಾಮೀನು ಮಂಜೂರು ಮಾಡಬೇಕು ಎಂಬುವುದು ಎಲ್ಲಾ ಅರ್ಜಿದಾರರ ವಾದವಾಗಿದೆ. ಇದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿರುವ ಪ್ರಾಸಿಕ್ಯೂಷನ್ "ಮೋಹನ್ ನಾಯಕ್ ಈ ಹಿಂದೆ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಹೈಕೋರ್ಟ್‌ನ ಬೇರೊಂದು ಪೀಠ ತಿರಸ್ಕರಿಸಿದ್ದು, ಕೊಲೆ, ಪಿತೂರಿಯಂಥ ಗಂಭೀರ ಆರೋಪಗಳಿರುವಾಗ ಜಾಮೀನು ನೀಡಲಾಗದು" ಎಂದಿದೆ.

"ಇಡೀ ಪ್ರಕರಣದಲ್ಲಿ ಜಾಮೀನು ಪಡೆದಿರುವ ಏಕೈಕ ಮತ್ತು ಮೊದಲ ಆರೋಪಿ ಮೋಹನ್ ನಾಯಕ್ ಆಗಿದ್ದು, ಆತನ ಜಾಮೀನು ಆದೇಶವನ್ನು ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಿದೆ. ಅದು ವಿಚಾರಣೆಗೆ ಬಾಕಿಯಿದೆ" ಎಂದು ತಿಳಿಸಿದೆ.

ಆರೋಪಿ ಅಮಿತ್ ದಿಗ್ವೇಕರ್ ಪ್ರತಿನಿಧಿಸಿದ್ದ ವಕೀಲ ಬಸವರಾಜ ಸಪ್ಪಣ್ಣವರ್ ಅವರು "ಒಂದನೇ ಆರೋಪಿ ಅಮೋಲ್ ಕಾಳೆಯ ಸ್ವಯಂ ಹೇಳಿಕೆ ಆಧರಿಸಿ ಅಮಿತ್‌ನನ್ನು ಬಂಧಿಸಲಾಗಿದೆ. ಇಡೀ ಪ್ರಕರಣದಲ್ಲಿ ಅಮಿತ್ ಮೇಲಿರುವ ಏಕೈಕ ಆರೋಪ ಹಣಕಾಸಿನ ನೆರವು ನೀಡಿರುವುದು. ಅವರು ಕೊಲೆಯಲ್ಲಿ ನೇರವಾಗಿ ಭಾಗಿಯಾಗಿಲ್ಲ. ಅಮಿತ್‌ರಿಂದ ಆಧಾರ್ ಕಾರ್ಡ್, ಗುರುತಿನ ಚೀಟಿ, ಬಸ್ ಟಿಕೆಟ್ ಜಪ್ತಿ ಮಾಡಲಾಗಿದೆ. ಬೇರೆ ಏನೂ ಮಾಡಿಲ್ಲ. 2018ರ ಮೇ 21ರಿಂದ ಜೈಲಿನಲ್ಲಿದ್ದಾರೆ. 11ನೇ ಆರೋಪಿ ಮೋಹನ್ ನಾಯಕ್‌ಗೆ ನೀಡಿರುವಂತೆ ಅಮಿತ್‌ಗೂ ಜಾಮೀನು ಮಂಜೂರು ಮಾಡಬೇಕು" ಎಂದು ಕೋರಿದರು.

ಆರೋಪಿ ಕೆ.ಟಿ ನವೀನ್ ಕುಮಾರ್‌ನನ್ನು ಪ್ರತಿನಿಧಿಸಿದ್ದ ಹಿರಿಯ ವಕೀಲ ಎಂ. ಅರುಣ್ ಶ್ಯಾಮ್ ಅವರು "13ನೇ ಆರೋಪಿ ಸುಜಿತ್ ಜೊತೆ ನವೀನ್ ಕುಮಾರ್ ಪಾರ್ಕ್‌ನಲ್ಲಿ ಮಾತನಾಡಿದ್ದಾನೆ ಎಂದು ಆರೋಪಿಸಲಾಗಿದೆ. ನವೀನ್‌ನಿಂದ ಸಿಮ್ ಕಾರ್ಡ್ ವಶಪಡಿಸಲಾಗಿದೆ ಎಂದು ಹೇಳಲಾಗಿದೆ. ಸಿಮ್ ಕಾರ್ಡ್ ನೀಡಿದ ವ್ಯಕ್ತಿಯ ಹೆಸರು ನವೀನ್ ಕುಮಾರ್ ಆಗಿದ್ದು, ಅವರು ವಿರುದ್ಧವಾಗಿ ಸಾಕ್ಷ್ಯ ನುಡಿದಿದ್ದಾರೆ" ಎಂದರು.

# ಲೈಂಗಿಕ ದೌರ್ಜನ್ಯ ಪ್ರಕರಣ: ಪ್ರಜ್ವಲ್ ರೇವಣ್ಣ ಜಾಮೀನು ಅರ್ಜಿ ವಜಾ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಬಂಧಿತರಾಗಿರುವ ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರ ಜಾಮೀನು ಅರ್ಜಿಯನ್ನು ಬೆಂಗಳೂರಿನ ಜನ ಪ್ರತಿನಿಧಿಗಳ ವಿಶೇಷ ನ್ಯಾಯಾಲಯ ವಜಾಗೊಳಿಸಿದೆ.

ಹಾಸನ ಜಿಲ್ಲೆ ಹೊಳೆನರಸೀಪುರ ಪೊಲೀಸ್ ಠಾಣೆಯಲ್ಲಿ ದಾಖಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾಮೀನು ಕೋರಿ ಪ್ರಜ್ವಲ್ ರೇವಣ್ಣ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ್ದ ನ್ಯಾಯಧೀಶ ಸಂತೋಷ್ ಗಜಾನನ ಭಟ್, ತೀರ್ಪು ಕಾಯ್ದಿರಿಸಿದ್ದರು. ಇಂದು (ಜೂನ್ 26) ಅರ್ಜಿ ವಜಾಗೊಳಿಸಿ ಆದೇಶಿಸಿದ್ದಾರೆ.

ಹೊಳೆನರಸೀಪುರದಲ್ಲಿ ದಾಖಲಾಗಿರುವ ಪ್ರಕರಣದಲ್ಲಿ ಪ್ರಜ್ವಲ್ ರೇವಣ್ಣ ಬಂಧಿಸಿರುವ ಎಸ್‌ಐಟಿ ಪೊಲೀಸರು ವಿಚಾರಣೆ ನಡೆಸಿ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದರು. ನ್ಯಾಯಾಲಯ ನ್ಯಾಯಾಂಗ ಬಂಧನ ವಿಧಿಸಿದೆ. ಹಾಗಾಗಿ, ಜಾಮೀನು ಕೋರಿ ಪ್ರಜ್ವಲ್ ಅರ್ಜಿ ಸಲ್ಲಿಸಿದ್ದರು.

**ನರಗುಂದ ತಾಲೂಕು ನರೇಗಾ ಕೆಲಸದಲ್ಲಿ ಮಹಿಳೆಯರೇ ಮುಂದೆ | ಕಾಮಗಾರಿಗಳಲ್ಲಿ ಶೇ 50.36ರಷ್ಟು ಪಾಲ್ಗೊಳ್ಳುವಿಕೆ**

# ಸಾಮೂಹಿಕ ಕಾಮಗಾರಿಗಳಲ್ಲಿ ಮಹಿಳೆಯರದ್ದೇ ಮೇಲುಗೈ

■ವಿಜಯಸಾಕ್ಷಿ ಸುದ್ದಿ, ನರಗುಂದ

ನರೇಗಾ ಯೋಜನೆಯಡಿ ಕೈಗೊಂಡ ಸಾಮೂಹಿಕ ಕಾಮಗಾರಿಗಳಲ್ಲಿ ಮಹಿಳಾ ಕೂಲಿಕಾರರು ಪುರುಷ ಕೂಲಿಕಾರರಿಗಿಂತ ಹೆಚ್ಚು ಪ್ರಮಾಣದಲ್ಲಿ ಭಾಗವಹಿಸುವ ಮೂಲಕ ನರಗುಂದ ತಾಲೂಕಿನಲ್ಲಿ ಕಳೆದ ನಾಲ್ಕೈದು ವರ್ಷಗಳಲ್ಲಿ ಮಾಡಿರದ ಸಾಧನೆಯನ್ನು ಈ ವರ್ಷದ ಆರ್ಥಿಕ ವರ್ಷದಲ್ಲಿ ನರಗುಂದ ತಾಲೂಕು ಪಂಚಾಯತ ಮಾಡಿದೆ. ಈ ಮೂಲಕ ರಾಜ್ಯ ಸರ್ಕಾರದ ಮಹಿಳಾ ಸಬಲೀಕರಣದ ಉದ್ದೇಶವನ್ನು ಸಾಕಾರಗೊಳಿಸುವಲ್ಲಿ ಮಹತ್ವದ ಹೆಜ್ಜೆಯಿಟ್ಟಿದೆ.

2024–25ನೇ ಸಾಲಿನಲ್ಲಿ ತಾಲೂಕಿನ 13 ಗ್ರಾ.ಪಂಗಳ ವ್ಯಾಪ್ತಿಯಲ್ಲಿ ಒಟ್ಟು 2,29,798 ಮಾನವ ದಿನಗಳ ಸೃಜನೆಯ ಗುರಿ ಹೊಂದಲಾಗಿದೆ. ಗುರಿಗೆ ಅನುಗುಣವಾಗಿ ಸದ್ಯ ಒಟ್ಟು 1,85,496 ಮಾನವ ದಿನಗಳ ಕೆಲಸಗಳನ್ನು ಮಾಡಲಾಗಿದೆ. ಈ ಪೈಕಿ 93,420 ಮಾನವ ದಿನಗಳಲ್ಲಿ ಮಹಿಳಾ ಕೂಲಿಕಾರರು ಕೆಲಸ ಮಾಡಿದ್ದಾರೆ. ಹೀಗಾಗಿ ತಾಲೂಕಿನ ನರೇಗಾ ಕೆಲಸದಲ್ಲಿ ಕೂಲಿಕಾರರ ಭಾಗವಹಿಸುವಿಕೆಯಲ್ಲಿ ಶೇ.50.36ರಷ್ಟು ಮಹಿಳೆಯರಿದ್ದಾರೆ.

ನರೇಗಾ ಕಾಮಗಾರಿ ಮಾನವ ದಿನಗಳ ಸೃಜನೆಯಲ್ಲಿ ಮಹಿಳೆಯರ ಪಾಲ್ಗೊಳ್ಳುವಿಕೆ ಪ್ರಮಾಣ 2020–21ನೇ ಸಾಲಿನಲ್ಲಿ ಶೇ. 41.48ರಷ್ಟಿದ್ದರೆ, 2021–22ನೇ ಸಾಲಿನಲ್ಲಿ 41.39ರಷ್ಟಿತ್ತು. 2022–23ನೇ ಸಾಲಿನಲ್ಲಿ 45.47ರಷ್ಟಿದ್ದರೆ 2023–24ರಲ್ಲಿ 48.77ರಷ್ಟಿತ್ತು. ಸದ್ಯ 2024–25ರ ಆರ್ಥಿಕ ವರ್ಷ ಆರಂಭವಾಗಿ ಮೂರು ತಿಂಗಳು ಕಳೆಯುವುದರೊಳಗೆ ತಾಲೂಕಿನ ಮಹಿಳಾ ಭಾಗವಹಿಸುವಿಕೆ ಪ್ರಮಾಣ ಶೇ.50.36ರಷ್ಟಾಗಿದೆ.

ಸಮಾಜದಲ್ಲಿ ಮಹಿಳೆಯರು ಆರ್ಥಿಕವಾಗಿ ಸಬಲರಾಗಬೇಕೆಂಬ ಉದ್ದೇಶದಿಂದ ನರೇಗಾ ಕಾಮಗಾರಿಯಲ್ಲಿ ಪುರುಷರಿಗೆ ಸರಿಸಮಾನವಾಗಿ 349 ರೂ ಕೂಲಿ ಮೊತ್ತವನ್ನು ಕೊಡಲಾಗುತ್ತಿದೆ. ನರೇಗಾ ಕಾಮಗಾರಿಯಲ್ಲಿ ಮಹಿಳಾ ಕೂಲಿಕಾರರು ಯಾವುದೇ ಮುಜುಗರಕ್ಕೆ ಒಳಗಾಗದೇ ಕೆಲಸ ನಿರ್ವಹಣೆ ಮಾಡಬಹುದು ಎಂಬುದನ್ನು ಮಹಿಳಾ ಕೂಲಿಕಾರರಿಗೆ ಮನದಟ್ಟು ಮಾಡಿಕೊಡಲಾಯಿತು. ಪ್ರತಿಯೊಂದು ಗ್ರಾ.ಪಂಗಳಲ್ಲಿ ಮಹಿಳಾ ಒಕ್ಕೂಟದ ಸಂಘಟನೆಗಳ ಸದಸ್ಯರನ್ನು ಸಂಪರ್ಕಿಸಿ ನರೇಗಾ ಕೆಲಸಗಳಲ್ಲಿ ಮಹಿಳೆಯರನ್ನು ತೊಡಗಿಸುವಂತೆ ಪ್ರೇರಣೆ ನೀಡಲಾಯಿತು. ಯೋಜನೆಯಡಿ ಮಹಿಳೆಯರು ಕೆಲಸ ಕೈಗೊಂಡರೆ ಮಹಿಳಾ ಕೂಲಿಕಾರರ ವೈಯಕ್ತಿಕ ಖಾತೆಗೆ ನೇರವಾಗಿ ಹಣ ಸಂದಾಯವಾಗುತ್ತದೆ. ಗ್ರಾ.ಪಂಗಳ ವ್ಯಾಪ್ತಿಗಳಲ್ಲಿ ಯುವಕ ಮಂಡಲಗಳ ಸಭೆ, ಕೂಲಿಕಾರರ ಸಭೆ, ಮಹಿಳಾ ಸ್ತ್ರೀಶಕ್ತಿ ಸಭೆ ಕೈಗೊಂಡು ನರೇಗಾ ಯೋಜನೆ ಬಗ್ಗೆ ಜಾಗೃತಿ ಮೂಡಿಸಿ ಸೂಕ್ತ ಕೆಲಸ ನಿರ್ವಹಣೆಗೆ ಕ್ರಮವಹಿಸಿದ್ದರಿಂದಾಗಿ ನರೇಗಾ ಕೆಲಸದಲ್ಲಿ ಮಹಿಳೆಯರು ಹೆಚ್ಚು ಭಾಗವಹಿಸಲು ಕಾರಣವಾಗಿದೆ.



ಈ ವರ್ಷ ಬರಗಾಲದಿಂದಾಗಿ ದುಡಿಯೋಕೆ ಕೆಲಸ ಇಲ್ಲ ಎಂಬ ಚಿಂತೆ ಇತ್ತು. ಆದರೆ ನಮ್ಮ ಗ್ರಾ.ಪಂ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಕೆಲಸ ನೀಡಿದರು. ಒಡ್ಡಿನ (ಬದು ನಿರ್ಮಾಣ) ಕೆಲಸಕ್ಕೆ ಹೋಗಿದ್ದರಿಂದ ನನ್ನ ಖಾತೆಗೆ ಹಣ ಜಮಾವಣೆ ಆಯಿತು. ಬಂದ ಹಣದಲ್ಲಿ ಮಕ್ಕಳ ಶಾಲೆ ಖರ್ಚು, ಮನೆಯ ಖರ್ಚಿಗೆ ಸಹಾಯಕವಾಯಿತು.

**– ಮಂಜುಳಾ ಗೊಬ್ಬರಗುಂಪಿ.**
ಮಹಿಳಾ ಕೂಲಿಕಾರರು,
ಬೆನಕನಕೊಪ್ಪ ಗ್ರಾ.ಪಂ.

ಈ ವರ್ಷ ಶೇ.60ರಷ್ಟು ಮಹಿಳಾ ಭಾಗವಹಿಸುವಿಕೆ ಪ್ರಮಾಣ ಹೆಚ್ಚಿಸಲು ಗುರಿ ಹೊಂದಲಾಗಿದೆ. ಸದ್ಯ ಶೇ.50.36ರಷ್ಟು ಪ್ರಗತಿ ಸಾಧಿಸಲಾಗಿದೆ. 2024–25ನೇ ಸಾಲಿನ ಆರ್ಥಿಕ ವರ್ಷ ಮುಕ್ತಾಯಕ್ಕೆ 9 ತಿಂಗಳು ಬಾಕಿಯಿದೆ. ಮುಂಬರುವ ಯೋಜನೆಯ ವೈಯಕ್ತಿಕ ಹಾಗೂ ಸಮುದಾಯ ಕಾಮಗಾರಿಗಳಲ್ಲಿ ಮಹಿಳೆಯರಿಗೆ ಪ್ರಾತಿನಿಧ್ಯ ನೀಡುವ ಮೂಲಕ ತಾಲೂಕಿನ ಗುರಿ ಸಾಧನೆಗೆ ಕ್ರಮವಹಿಸಲಾಗುವುದು. ತಾಲೂಕಿನ ಎಲ್ಲ ನರೇಗಾ ಸಿಬ್ಬಂದಿ ಹಾಗೂ ಆರ್.ಡಿ.ಪಿ.ಆರ್ ಇಲಾಖೆಯ ಸಿಬ್ಬಂದಿಗಳ ಸಹಕಾರದಿಂದ ನರಗುಂದ ತಾಲೂಕಿನಲ್ಲಿ ಈ ಪ್ರಗತಿ ಸಾಧ್ಯವಾಗಿದೆ.

**– ಎಸ್.ಕೆ.ಇನಾಮದಾರ.**
ಕಾರ್ಯನಿರ್ವಾಹಕ ಅಧಿಕಾರಿಗಳು, ತಾ.ಪಂ–ನರಗುಂದ.



ಮಹಿಳಾ ಕೂಲಿಕಾರರಿಗೆಂದೇ ಪ್ರತ್ಯೇಕವಾಗಿ ಸಮುದಾಯ ಕಾಮಗಾರಿ ಆರಂಭಿಸಿ ಕೆಲಸ ನೀಡಲಾಯಿತು. ಯೋಜನೆಯಡಿ ಕಾಯಕಬಂಧುಗಳ ನೇಮಕದಲ್ಲಿ ಮಹಿಳೆಯರಿಗೆ ಪ್ರಾತಿನಿಧ್ಯ ನೀಡಲಾಯಿತು. ಕಾಯಕ ಬಂಧುಗಳಿಗೆ ಸೂಕ್ತ ತರಬೇತಿ ನೀಡಿ ಯೋಜನೆಯಡಿ ಮಹಿಳಾ ಕೂಲಿಕಾರರನ್ನು ಸಂಘಟಿಸಿ ನರೇಗಾ ಕೆಲಸದಲ್ಲಿ ಮಹಿಳೆಯರನ್ನು ತೊಡಗಿಸಿಕೊಂಡಿದ್ದು ಮಹಿಳಾ ಕೂಲಿಕಾರರ ಪ್ರಮಾಣ ಹೆಚ್ಚಳಕ್ಕೆ ಸಹಾಯಕವಾಯಿತು.

**– ಸಂತೋಷಕುಮಾರ್ ಪಾಟೀಲ್.**
ಸಹಾಯಕ ನಿರ್ದೇಶಕರು,
ಗ್ರಾಮೀಣ ಉದ್ಯೋಗ, ತಾ.ಪಂ ನರಗುಂದ.

## ಯುವಕರು ಮಾದಕ ವ್ಯಸನದಿಂದ ದೂರವಿರಿ

▶▶ಮೊದಲನೇ ಪುಟದಿಂದ

ನಮ್ಮ ದೇಶದಲ್ಲಿ ಮೊದಲು ಬಡತನ, ಹಸಿವು, ಶಿಕ್ಷಣದಿಂದ ವಂಚಿತರಾದಂತ ಸಮಸ್ಯೆಗಳು ಇದ್ದವು. ಪ್ರಸ್ತುತವಾಗಿ ನಮ್ಮ ಸಮಾಜದಲ್ಲಿ ಮಾದಕ ವ್ಯಸನದಂತಹ ಗಂಭೀರ ಸಮಸ್ಯೆಗಳು ಹೆಚ್ಚಾಗಿದ್ದು ಜಗತ್ತಿನಲ್ಲಿ ಹಲವಾರು ಜನ ಈ ಮಾದಕ ವ್ಯಸನಕ್ಕೆ ಬಲಿಪಶುವಾಗುತ್ತಿದ್ದಾರೆ. ಇಂತಹ ಸಮಸ್ಯೆಯಿಂದ ಕೇವಲ ವಯಕ್ತಿಕ ಹಾನಿಯಲ್ಲದೆ, ದೇಶದ ಆರ್ಥಿಕತೆ ಸೇರಿದಂತೆ ದೇಶದ ಅಭಿವೃದ್ಧಿ ಹಿನ್ನಡೆಯಾಗುತ್ತಿದೆ ಎಂದರು.

ಮಾದಕ ವ್ಯಸನ ಮುಕ್ತ ಸಮಾಜ ನಿರ್ಮಿಸಲು ಕೇವಲ ಪೊಲೀಸ್ ಇಲಾಖೆಗೆಸೀಮಿತವಾಗಿದ್ದಲ್ಲ. ಸಾರ್ವಜನಿಕರು ಜವಾಬ್ದಾರಿಯುತರಾಗಿ, ಮಾದಕ ವಸ್ತುಗಳನ್ನು ಅಕ್ರಮವಾಗಿ ಕಳ್ಳಸಾಗಣೆ ಮಾಡುತ್ತಿದ್ದು ತಿಳಿದು ಬಂದರೆ ತಕ್ಷಣ ಪೊಲೀಸ್ ಇಲಾಖೆಯ ಗಮನಕ್ಕೆ ತರಬೇಕು ಎಂದು ಹೇಳಿದರು.

ಜಿಲ್ಲಾ ಕುಷ್ಠರೋಗ ನಿಯಂತ್ರಣ ಅಧಿಕಾರಿ ಡಾ.ರಾಜೇಂದ್ರ ಬಸರಿಗಿಡದ ಮಾತನಾಡಿ, ಸಾಮಾಜಿಕ ಜಾಲತಾಣ ಮತ್ತು ಚಲನಚಿತ್ರಗಳ ಪ್ರಭಾವಕ್ಕೆ ಒಳಗಾಗಿ ಇಂದಿನ ವಿದ್ಯಾರ್ಥಿಗಳು ಮಾದಕ ವ್ಯಸನಕ್ಕೆ ತುತ್ತಾಗುತ್ತಾರೆ. ಅಂತಹ ವಿದ್ಯಾರ್ಥಿಗಳು ಜಿಲ್ಲಾ ಮಾನಸಿಕ ಆರೋಗ್ಯ ಕೇಂದ್ರದಿಂದ ನೀಡುವ ಉಚಿತ ಚಿಕಿತ್ಸೆಯನ್ನು ಪಡೆದುಕೊಳ್ಳಬಹುದು ಎಂದರು.


ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಸಹಾಯಕ ಪ್ರಾಧ್ಯಾಪಕ ಡಾ.ಅರವಿಂದ ಕೆ ಮಾತನಾಡಿ, ಚಿಕಿತ್ಸೆಗಿಂತ ತಡೆಗಟ್ಟವಿಕೆ ಉತ್ತಮವಾಗಿದ್ದು, ಒಂದು ಸಿಗರೇಟ್ ಸೇರುವುದರಿಂದ ಜೀವನದ ಅತ್ಯಮೂಲ್ಯ 11 ನಿಮಿಷಗಳನ್ನು ಕಳೆದುಕೊಳ್ಳುತ್ತೇವೆ. ಸಿಗರೇಟನಲ್ಲಿ 6000ಕ್ಕೂ ಹೆಚ್ಚು ಹಾನಿಕಾರಕ ರಾಸಾಯನಿಕಗಳಿರುತ್ತವೆ. ಅದರಲ್ಲಿ 60ಕ್ಕೂ ಹೆಚ್ಚು ರಾಸಾಯನಿಕಗಳು ಕ್ಯಾನ್ಸರ್ ರೋಗ–ಕ್ಕೆ ದಾರಿಮಾಡಿಕೊಡುತ್ತವೆ. ವಿದ್ಯಾರ್ಥಿಗಳು ಕುತೂಹಲದಿಂದ ಮಾದಕ ವ್ಯಸನ ಪ್ರಾರಂಭಿಸಿ ಅದರಿಂದ ಹೊರಬರದಂತೆ ಅದಕ್ಕೆ ದಾಸರಾಗುತ್ತಾರೆ. ಹಾಗಾಗಿ ಒಳ್ಳೆಯ ಅಭ್ಯಾಸಗಳನ್ನು ರೂಢಿ ಮಾಡಿಕೊಂಡು ಜೀವನದಲ್ಲಿ ಸಫಲರಾಗಬೇಕೆಂದು ತಿಳಿಸಿದರಲ್ಲದೆ, ಪಿಪಿಟಿ ಮೂಲಕ ಮಾದಕ ವ್ಯಸನದ ಕಾರಣಗಳು, ಅದರಿಂದಾಗುವ ಪರಿಣಾಮ ಸೇರಿದಂತೆ ವ್ಯಸನದಿಂದ ಹೇಗೆ ಮುಕ್ತರಾಗಬೇಕೆಂದು ವಿದ್ಯಾರ್ಥಿಗಳಿಗೆ ವಿವರಿಸಿದರು.

ಕಾರ್ಯಕ್ರಮದಲ್ಲಿ ಪೊಲೀಸ್ ಇಲಾಖೆಯ ಎಸ್.ಎಮ್. ಶಿರಗುಪ್ಪಿ, ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ ಚವ್ಹಾಣ, ಉಪ ಪ್ರಾಚಾರ್ಯ ಡಾ. ವಿ.ಟಿ. ನಾಯ್ಕರ, ಪ್ರಾಧ್ಯಾಪಕ ಆರ್.ಆರ್. ಕುಲಕರ್ಣಿ ಆರೋಗ್ಯ ಇಲಾಖೆಯ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು. ಪ್ರೊ. ಬಾಹುಬಲಿ ಜೈನರ್ ಕಾರ್ಯಕ್ರಮ ನಿರ್ವಹಿಸಿದರು.

## ಬಿಜೆಪಿ ಎಸ್.ಟಿ. ಮೋರ್ಚಾ ವತಿಯಿಂದ ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಗದಗ

ಕಾಂಗ್ರೆಸ್ ಚುನಾವಣಾ ವೆಚ್ಚಕ್ಕೆ ಬಳಕೆಯಾಗಿರುವ ವಾಲ್ಮೀಕಿ ನಿಗಮದಲ್ಲಿ ಸರಕಾರಿ ಹಣದ ವರ್ಗಾವಣೆಯ ಗೋಲ್‌ಮಾಲ್, ಪರಿಶಿಷ್ಟ ಪಂಗಡದ ಅನುದಾನದ 187 ಕೋಟಿ ರೂ. ಸಂಶಯಾತ್ಮಕ ಖಾತೆಗಳಿಗೆ ವರ್ಗಾವಣೆ ಮಾಡಿರುವ ಹಿನ್ನೆಲೆಯಲ್ಲಿ ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಎಸ್.ಟಿ. ಮೋರ್ಚಾ ವತಿಯಿಂದ ಜೂನ್ 28ರ ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಎದುರಿಗೆ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.




ಬಿಜೆಪಿಯ ಎಲ್ಲ ಚುನಾಯಿತ ಪ್ರತಿನಿಧಿಗಳು, ಪದಾಧಿಕಾರಿಗಳು, ಕಾರ್ಯಕರ್ತರು, ಹಿರಿಯರು, ಹಿತೈಷಿಗಳು ಆಗಮಿಸಬೇಕೆಂದು ಗದಗ ಜಿಲ್ಲಾಧ್ಯಕ್ಷರಾದ ತೋಟಪ್ಪ(ರಾಜು) ಕುರುಡಗಿ, ಎಸ್.ಟಿ. ಮೋರ್ಚಾ ಗದಗ ಜಿಲ್ಲಾಧ್ಯಕ್ಷ ಈಶ್ವರಪ್ಪ ಹು. ರಂಗಪ್ಪನವರ, ಪ್ರ.ಕಾ. ವಾಯ್.ಪಿ. ಅಡ್ನೂರ, ಯಲ್ಲಪ್ಪ ಶೆರಿ, ಪ್ರಮುಖರಾದ ಈಶಪ್ಪ ನಾಯ್ಕರ, ಎಚ್.ಕೆ. ಹಟ್ಟಿಮನಿ, ನಾಗರಾಜ ತಳವಾರ, ಮಂಜುನಾಥ ತಳವಾರ, ಗೋವಿಂದಪ್ಪ ಪೂಜಾರ, ಬಸವರಾಜ ಹರ್ಲಾಪೂರ, ರಂಗಪ್ಪ ಯರಗುಡಿ, ವಸಂತ ವಾಲ್ಮೀಕಿ, ರಾಜಕುಮಾರ ಕೊನಣ್ಣವರ ಮುಂತಾದವರು ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ರಾಣಿ ಚನ್ನಮ್ಮ ವಸತಿ ಶಾಲೆಗೆ ಡಿಸಿ ಭೇಟಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಬುಧವಾರ ಶಿರಹಟ್ಟಿ ಪಟ್ಟಣದಲ್ಲಿ ಆಯೋಜಿಸಲಾಗಿದ್ದ ತಾಲೂಕಾ ಮಟ್ಟದ ಜನಸ್ಪಂದನ ಸಭೆಯಲ್ಲಿ ಭಾಗವಹಿಸಲು ಆಗಮಿಸಿದ್ದ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ಅನಿರೀಕ್ಷಿತವಾಗಿ ಪಟ್ಟಣದ ರಾಣಿ ಚನ್ನಮ್ಮ ವಸತಿ ಶಾಲೆಗೆ ಭೇಟಿ ನೀಡಿ, ಅಲ್ಲಿಯ ವಿದ್ಯಾರ್ಥಿಗಳ ಕೊಠಡಿಗಳಿಗೆ ತೆರಳಿ ಅವರ ಶೈಕ್ಷಣಿಕ ಗುಣಮಟ್ಟ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಡಿಸಿ ವೈಶಾಲಿ ಅವರು ವಿದ್ಯಾರ್ಥಿಗಳಿಗೆ ಕನ್ನಡ, ಇಂಗ್ಲೀಷ್ ವಿಷಯಗಳ ಕುರಿತು ಕೆಲ ಪ್ರಶ್ನೆಗಳನ್ನು ಕೇಳಿ ವಿದ್ಯಾರ್ಥಿಗಳಿಂದ ಉತ್ತರಗಳನ್ನು ಪಡೆದುಕೊಂಡು ಅವುಗಳ ಕುರಿತು ಚರ್ಚೆ ನಡೆಸಿದರು. ಈ ಸಂದರ್ಭದಲ್ಲಿ ಸಿಇಓ ಭರತ್. ಎಸ್, ತಾಲೂಕಾ ಸಮಾಜ ಕಲ್ಯಾಣಾಧಿಕಾರಿ ಶರಣಯ್ಯ ಹಿರೇಮಠ, ಬಿಸಿಎಂನ ಮರಿಗೌಡ ಸುರಕೋಡ, ಪ್ರಾಚಾರ್ಯ ನಾಗರಾಜ ಕಳಸಾಪೂರ ಉಪಸ್ಥಿತರಿದ್ದರು.




## ಸಾರ್ವಜನಿಕರ ಅಲೆದಾಟ ತಪ್ಪಿಸಿ

▶▶ಮೊದಲನೇ ಪುಟದಿಂದ

ಸಭೆಯಲ್ಲಿ ಶಿಗ್ಲಿ ಗ್ರಾಮದ ನೂರಾರು ಮಹಿಳೆಯರು ಆಗಮಿಸಿ ನಮ್ಮ ಭೂಮಿ ನಮ್ಮ ತೋಟದ ಜಮೀನು ನೀಡಿರುವ ಫಲಾನುಭವಿಗಳಿಗೆ ಉತಾರ ಪೂರೈಸುವಂತೆ ಕಚೇರಿಗಳಿಗೆ ಹಲವಾರು ವರ್ಷಗಳಿಂದ ಅಲೆದಾಡುತ್ತಿದ್ದೇವೆ. ನಮಗೆ ಹಕ್ಕು ಪತ್ರ ನೀಡಿದ್ದರೂ ಉತಾರ ಪೂರೈಸುತ್ತಿಲ್ಲ ಎಂದು ಅಳಲು ತೋಡಿಕೊಂಡರು. ಬೇಗನೆ ನಮಗೆ ನಮ್ಮ ಹೆಸರಿಗೆ ಭೂಮಿ ಇರುವ ಬಗ್ಗೆ ಉತಾರ ದೊರೆಯುವಂತೆ ಮಾಡಬೇಕು ಎಂದು ಕೈಮುಗಿದು ಕೇಳುತ್ತಿದ್ದಂತೆ ಜಿಲ್ಲಾಧಿಕಾರಿಗಳು ಕಂದಾಯ ಇಲಾಖೆಗೆ ಸೂಚನೆ ನೀಡಿ ಒಂದು ತಿಂಗಳಲ್ಲಿ ಇದನ್ನು ಸರಿಪಡಿಸಿ ಎಂದು ಸೂಚಿಸಿದರು.

ಉಂಡೇನಹಳ್ಳಿ ಗ್ರಾಮದಲ್ಲಿ ಸುಮಾರು 150 ಎಕರೆಯಷ್ಟು ಅರಣ್ಯ ಪ್ರದೇಶದಲ್ಲಿರುವ ಉಳುಮೆ ಮಾಡುವ ಭೂಮಿಗಳಿಗೆ ರಸ್ತೆ ಸೌಲಭ್ಯ ಕಲ್ಪಿಸಬೇಕೆಂದು ಹಲವಾರು ಬಾರಿ ಬೇಡಿಕೆ ಇಟ್ಟಿದ್ದರೂ ಈಡೇರುತ್ತಿಲ್ಲ ಎಂದು ಹೇಳಿದರು. ಇದೊಂದೇ ಅಲ್ಲದೇ ತಾಲೂಕಿನಾದ್ಯಂತ ರೈತ ಸಂಪರ್ಕ ರಸ್ತೆಗಳ ಸಮಸ್ಯೆ ಪರಿಹಾರಕ್ಕೆ ಬಂದ ಅರ್ಜಿಗಳನ್ನು ಪರಿಶೀಲಿಸಿ ಕಂದಾಯ, ಸರ್ವೇಯವರು ಪೊಲೀಸರ ಸಹಕಾರದೊಂದಿಗೆ ಅದಷ್ಟು ಬೇಗ ಪರಿಹರಿಸಬೇಕು ಎಂದು ವಿನಂತಿಸಿದರು.

ಪಟ್ಟಣದ ಇಟ್ಟಿಗೆರೆ ಭಾಗದ ನಿವಾಸಿಗಳು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ, ಪುರಸಭೆಯಲ್ಲಿ ಕೆರೆ ಅಭಿವೃದ್ಧಿ ಶುಲ್ಕದ ಹಣವಿದ್ದರೂ ಇಲ್ಲಿಯವರೆಗೂ ಕೆರೆ ಅಭಿವೃದ್ಧಿಯಾಗಿಲ್ಲ. ಮಳೆಗಾಲದಲ್ಲಿ ಅಲ್ಲಿನ ಜನರು ಸಮಸ್ಯೆ ಎದುರಿಸುತ್ತಿದ್ದು, ಕೂಡಲೇ ಕೆರೆ ಅಭಿವೃದ್ಧಿ ಕಾಮಗಾರಿ ಪ್ರಾರಂಭಿಸುವಂತೆ ಶಂಕರ ಬ್ಯಾಡಗಿ, ಎನ.ಬಿ. ಬಂಕಾಪೂರ, ಸಚಿನ್ ಮುಂತಾದವರು ಮನವಿ ಮಾಡಿದರು. ಪುರಸಭೆ, ಎಡಿಆರ್‌ಎಲ್ ಅಧಿಕಾರಿಗಳಿಗೆ ಈ ಕುರಿತಂತೆ ಪರಿಶೀಲನೆ ಮಾಡಿ ಕೂಡಲೇ ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ವಾರ್ಡ್ ನಂ.1ರ ವ್ಯಾಪ್ತಿಯ ಕೌಡೇಶ್ವರಿ ನಗರದ ನಿವಾಸಿಗಳು ಮೂಲಭೂತ ಸೌಲಭ್ಯಗಳ ಕುರಿತು ಮನವಿ ಸಲ್ಲಿಸಿದರು. ಪುರಸಭೆ ಮುಖ್ಯಾಧಿಕಾರಿ ಮಹೇಶ ಎಚ್ ಅವರಿಗೆ ಜಿಲ್ಲಾಧಿಕಾರಿಗಳು ಕ್ರಮ ಕೈಕೊಳ್ಳುವಂತೆ ಸೂಚನೆ ನೀಡಿದರು.

ಜನಸ್ಪಂದನ ಸಭೆಯಲ್ಲಿ ಮಾಶಾಸನ, ಗೃಹಲಕ್ಷ್ಮೀ, ಬಸ್ ಸಂಪರ್ಕ, ಶೌಚಾಲಯ ನಿರ್ಮಾಣ, ಬೆಳೆಪರಿಹಾರ, ರಸ್ತೆ ಅಭಿವೃದ್ಧಿ ಸೇರಿ ವಿವಿಧ ಇಲಾಖೆಗಳಿಗೆ ಸೇರಿದ 81 ಅರ್ಜಿಗಳು ಸ್ವೀಕೃತವಾಗಿದ್ದು, ಸ್ವೀಕೃತ ಅರ್ಜಿಗಳನ್ನು ಸ್ಥಳದಲ್ಲಿಯೇ ವಿಲೇವಾರಿ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಶಾಸಕ ಡಾ.ಚಂದ್ರು ಲಮಾಣಿ, ಜಿ.ಪಂ ಕಾರ್ಯನಿರ್ವಾಹಣಾಧಿಕಾರಿ ಭರತ್ ಎಸ್., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ತಹಸೀಲ್ದಾರ ವಾಸುದೇವ ಸ್ವಾಮಿ, ತಾ.ಪಂ ಇಓ ಕೃಷ್ಣಪ್ಪ ಧರ್ಮರ ಸೇರಿದಂತೆ ಜಿಲ್ಲಾ, ತಾಲೂಕು ಮಟ್ಟದ ಅಧಿಕಾರಿಗಳು, ಸಿಬ್ಬಂದಿ ಮತ್ತು ಸಾರ್ವಜನಿಕರು ಹಾಜರಿದ್ದರು.

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದಲ್ಲಿ ಜೂನ್ 27ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 22 ಈಶ್ವರ ಗುಡಿ ಲೈನ್, ಗಿರಣಿ ಲೈನ್, ದಖನಿಯವರ ಲೈನ್, ಶಿವಪ್ಪ ರವರ ಲೈನ್, ಧಾರವಾಡದವರ ಲೈನ್. ವಾರ್ಡ್ ನಂ. 1 ಎಸ್.ಎಂ ಕೃಷ್ಣ ನಗರ ಕೆಳಗಿನ ಭಾಗಗಳು, ಮೇಲಿನ ಭಾಗಗಳು. ವಾರ್ಡ್ ನಂ. 6 , 10 ಸಿಹಿ ನೀರಿನ ಬಾವಿ, ಮಸೂತಿ ಲೈನ್, ಗುಳಗುಂದಿಯವರ ಲೈನ್, ಗಣಾಚಾರಿ ಲೈನ್, ಮಾನೇದ ಲೇಔಟ್, ಮಲ್ಲಿಕಾರ್ಜುನ ಗುಡಿ ಲೈನ್, ಕಲ್ಮನಿಯವರ ಲೈನ್, ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 23 ಅರೋಗೇರಿ ಭಾಗ –1,2 ಕಗನಳ್ಳಿ ಭಾಗ –1 ಹೆಬಸೂರ ಲೈನ್, ಹೊನ್ನೆತ್ತಮ್ಮ ಗುಡಿ ಭಾಗ –1,2 ಸೋಮನಗೌಡ್ರ ಲೈನ್, ಕಮತರ ಪ್ಲಾಟ್, ಕಾಳಮ್ಮನ ಗುಡಿ ಲೈನ್, ವಿಭೂತಿ ಓಣಿ, ಹನುಮಾನ ಗರಡಿ ಮನೆ, ದ್ರೌಪತಿ ಬಾವಿ, ಜಂತ್ಲಿಯವರ ಹೊಸ ಲೈನ್, ಉಸುಗಿನ ಕಟ್ಟಿ ಲೈನ್. ವಾರ್ಡ್ ನಂ. 24, 26 ಅಬ್ಬಿಗೇರಿ ಕಾಂಪೌಂಡ್, ಸಾಲಮನೆ, ಹಳೆ ಡಿಸಿ ಆಫೀಸ್ ಲೈನ್, ಕಮ್ಮಾರ ಸಾಲ, ತೆಗ್ಗಿನಲಾಟ್, ಮಕಾನಗಲ್ಲಿ, ಉರ್ದು ಶಾಲೆ ಬಳಿಯ ಉಳಿದ ಕೆಲ ಭಾಗಗಳು.

ಗದಗ ಬೆಟಗೇರಿ ಅವಳಿ ನಗರದ ಸಾರ್ವಜನಿಕರಲ್ಲಿ ವಿನಂತಿಸಿಕೊಳ್ಳುವುದೇನೆಂದರೆ ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಲೆ ಏರಿಕೆ ವಿರೋಧಿಸಿ ಬಿಜೆಪಿಯಿಂದ ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಾಸಕ ಡಾ. ಚಂದ್ರು ಲಮಾಣಿ ನೇತೃತ್ವದಲ್ಲಿ ರಾಜ್ಯ ಸರಕಾರ ಪೆಟ್ರೋಲ್–ಡಿಸೆಲ್, ಹಾಲಿನ ದರ ಏರಿಕೆ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಏರಿಕೆಯ ಜನ ವಿರೋಧಿ ನೀತಿಯನ್ನು ಖಂಡಿಸಿ ತಹಸೀಲ್ದಾರ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ರಾಜ್ಯ ಸರಕಾರ ಪೆಟ್ರೋಲ್, ಡೀಸೆಲ್ ಮೇಲೆ ತೆರಿಗೆ ಹಣವನ್ನು ಹೆಚ್ಚಿಸಿದ್ದರಿಂದ ಜನಸಾಮಾನ್ಯರು ಹಾಗೂ ಮಧ್ಯಮ ವರ್ಗದ ಜನರಿಗೆ ಜೀವನ ನಡೆಸಲು ತೊಂದರೆಯಾಗಿದೆ. ತೈಲಬೆಲೆ ಹೆಚ್ಚಿಸಿರುವದನ್ನು ತಕ್ಷಣ ಹಿಂಪಡೆಯಬೇಕು. ಪಂಚ ಗ್ಯಾರಂಟಿಗಳ ನೆಪದಲ್ಲಿ ರಾಜ್ಯದ ಖಜಾನೆ ಖಾಲಿ ಮಾಡಿ ಜನರ ಹಣವನ್ನು ಕಾಂಗ್ರೆಸ್ ಸರಕಾರ ಲೂಟಿ ಮಾಡುತ್ತಿದೆ. ತೆಲಂಗಾಣ ರಾಜ್ಯದ ಚುನಾವಣೆಗೆ ರಾಜ್ಯದ ವಾಲ್ಮೀಕಿ ನಿಗಮ ಮಂಡಳಿಯಿಂದ 187 ಕೋಟಿ ಹಣವನ್ನು ಲಪಟಾಯಿಸಿದೆ, ಎಸ್‌ಸಿ/ಎಸ್‌ಟಿ ಸಮುದಾಯದ ಅಭಿವೃದ್ಧಿಗೆ ಮೀಸಲಿರಿಸಿದ 11 ಸಾವಿರ ಕೋಟಿ ಗ್ಯಾರಂಟಿ ಯೋಜನೆ ನೆಪದಲ್ಲಿ ಲೂಟಿ ಮಾಡಿದೆ. ಸರಕಾರದ ಖಜಾನೆ ಖಾಲಿಯಾಗಿ ಹಣಕ್ಕಾಗಿ ಸರ್ಕಾರಿ ಆಸ್ತಿ ಮಾರಾಟಕ್ಕೆ ಕಾಂಗ್ರೆಸ್ ಮುಂದಾಗಿದೆ.

ಈ ಸಂದರ್ಭದಲ್ಲಿ ಸುನೀಲ್ ಮಹಾಂತಶೆಟ್ಟರ, ಬಸವರಾಜ ಪಲ್ಲೇದ, ನಾಗರಾಜ ಲಕ್ಕುಂಡಿ, ಫಕ್ಕೀರೇಶ ರಟ್ಟಿಹಳ್ಳಿ, ತಿಮ್ಮರಡ್ಡಿ ಮರಡ್ಡಿ, ಮೋಹನ ಗುತ್ತೆಮ್ಮನವರ, ನಿಂಗಪ್ಪ ಬನ್ನಿ, ಅಕ್ಬರಸಾಬ ಯಾದಗಿರಿ, ಅಶೋಕ ವರವಿ, ನಂದಾ ಪಲ್ಲೇದ, ಬಸವರಾಜ ವಡವಿ, ಯಲ್ಲಪ್ಪ ಇಂಗಳಗಿ, ರಾಜು ಕಪ್ಪತ್ತನವರ, ಲಕ್ಷ್ಮಣ ಬಾರಬಾರ, ಅನಿಲ ಮುಳಗುಂದ, ಗೂಳಪ್ಪ ಕರಿಗಾರ, ವೀರಣ್ಣ ಅಂಗಡಿ, ಮುತ್ತಣ್ಣ ಕಲಾದಗಿ, ಮಹೇಶ ಕಲ್ಲಪ್ಪನವರ, ಉಮೇಶ ಅಕ್ಕಿ ಮುಂತಾದವರು ಉಪಸ್ಥಿತರಿದ್ದರು.




ಶಾಸಕರ ಕ್ಷೇತ್ರ ಅಭಿವೃದ್ಧಿಗೆ ಅನುದಾನ ನೀಡದೆ ಸಾರ್ವಜನಿಕರ ಮೂಲಸೌಕರ್ಯ ನೀಡುವಲ್ಲಿ ಸಂಪೂರ್ಣವಾಗಿ ರಾಜ್ಯ ಸರಕಾರ ವಿಫಲವಾಗಿದೆ. ರಾಜ್ಯಪಾಲರು ಮಧ್ಯಸ್ಥಿಕೆ ವಹಿಸಿ ರಾಜ್ಯದ ಜನರಿಗೆ ಆಗುತ್ತಿರುವ ಅನ್ಯಾಯವನ್ನು ಸರಿಪಡಿಸಬೇಕೆಂದು ಮನವಿ ಮೂಲಕ ಆಗ್ರಹಿಸಿದರು.

## ಮಾದಿಗ ಸಮಾಜದ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿರಹಟ್ಟಿ/ಲಕ್ಷ್ಮೇಶ್ವರ ತಾಲೂಕಿನ ಮಾದಿಗ ಸಮಾಜದ ವಿದ್ಯಾರ್ಥಿಗಳಿಗೆ ಕರ್ನಾಟಕ ರಾಜ್ಯ ಮಾದಿಗ ನೌಕರರ ಸಂಘ ಲಕ್ಷ್ಮೇಶ್ವರ ಘಟಕದಿಂದ 2023–24ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ, ಯಾವುದೇ ಪದವಿಯಲ್ಲಿ ಶೇ.65ಕ್ಕಿಂತ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ವಿದ್ಯಾರ್ಥಿಗಳು ಅಂಕಪಟ್ಟಿ, ಜಾತಿ ಪ್ರಮಾಣಪತ್ರ, ಆಧಾರ್ ಕಾರ್ಡ್ ನಕಲು, 2 ಭಾವಚಿತ್ರ ಸಹಿತ ಜುಲೈ 5ರೊಳಗೆ ಸಂಘದ ಕಾರ್ಯಾಲಯಕ್ಕೆ ಅರ್ಜಿ ಸಲ್ಲಿಸಬೇಕು ಎಂದು ಸಂಘದ ಅಧ್ಯಕ್ಷರಾದ ಆರ್.ಎಫ್. ದೊಡ್ಡಮನಿ (ಮೊ–9448823445) ತಿಳಿಸಿದ್ದಾರೆ.

## ಧರ್ಮಾಚರಣೆಯಿಂದ ಸುಖ, ಶಾಂತಿ ಪ್ರಾಪ್ತಿ



**■ ವಿಜಯಸಾಕ್ಷಿ ಸುದ್ದಿ, ಚಿಂಚೋಳಿ**

ಜೀವನದ ಉನ್ನತಿಗೆ ಧರ್ಮವೇ ದಿಕ್ಸೂಚಿ. ಧರ್ಮದ ಪಾಲನೆಯಿಂದ ಜೀವನದಲ್ಲಿ ಸುಖ-ಶಾಂತಿ ಪ್ರಾಪ್ತವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ನಗರದ ಹಾರಕೂಡ ಶ್ರೀ ಚನ್ನಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಜರುಗಿದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಉದ್ಘಾಟನಾ ಸಮಾರಂಭ ನೆರವೇರಿಸಿ, ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಧರ್ಮದ ಹಲವಾರು ಆಚರಣೆಗಳು ಬೇರೆ ಬೇರೆ ಆದರೂ ಆ ಎಲ್ಲ ಧರ್ಮಗಳ ಗುರಿ ಮಾನವ ಕಲ್ಯಾಣವೇ ಆಗಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ವಿಶ್ವ ಬಂಧುತ್ವದ ಅದ್ಭುತ ಸಂದೇಶವನ್ನು ನೀಡಿ ಸಾಮರಸ್ಯ ಬದುಕಿಗೆ ಬೆಳಕು ತೆ-ೂರಿದ್ದಾರೆ. ಜಾತಿ, ಮತ, ಪಂಥಗಳ ಗಡಿ ಮೀರಿ ಸಾಮಾಜಿಕ ಸ್ವಾಸ್ಥ್ಯವನ್ನು ಕಾಪಾಡಿದ ಮೊದಲ ಕೀರ್ತಿ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಸಲ್ಲುತ್ತದೆ. ಧಾರ್ಮಿಕ ಮೌಲ್ಯಗಳನ್ನು ಪುನರುತ್ಥಾನಗೊಳಿಸಿ ಸೌಹಾರ್ದ ಬದುಕಿಗೆ ನಾಂದಿ ಹಾಡಿದ್ದಾರೆ. ಸಾಮಾಜಿಕ ಸತ್ಕ್ರಾಂತಿಗೈದ ಪರಮಾಚಾರ್ಯರು. ಮಾನವ ಧರ್ಮದ ಮಹತ್ವವನ್ನು ಬೋಧಿಸಿದ್ದಾರೆ. ಅವರ ಆದರ್ಶ ವಿಚಾರ ಧಾರೆಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡು ಸುಖ-ಶಾಂತಿಯ ಬದುಕಿಗೆ ಕಾರಣರಾಗಬೇಕು ಎಂದರು.

ನಿಡಗುಂದಾ ಕರುಣೇಶ್ವರ ಶಿವಾಚಾರ್ಯರು ಚಂದನಕೇರಾ ಅಭಿನವ ರಾಚೋಟೇಶ್ವರ ಶಿವಾಚಾರ್ಯರು ನೇತೃತ್ವ ವಹಿಸಿ ಮಾರ್ಗದರ್ಶನ ನೀಡಿದರು. ಕೊಡ್ಲಿ ಬಸವಲಿಂಗ ಶ್ರೀಗಳು, ಹೊಸಳ್ಳಿ ಸಿದ್ಧಲಿಂಗ ಶ್ರೀಗಳು, ಭರತನೂರು ಚಿಕ್ಕಗುರುನಂಜೇಶ್ವರ ಶ್ರೀಗಳು ಪಾಲ್ಗೊಂಡು ಉಪದೇಶಾಮೃತವನ್ನಿತ್ತರು.

ಗೌತಮ ಪಾಟೀಲ, ಶಶಿಧರ ಯಾಲಾಲ, ಶಂಕರಗೌಡ ಅಲ್ಲಾಪುರ, ಸಂತೋಷ ಗಡಂತಿ, ಗುಂಡಯ್ಯಸ್ವಾಮಿ, ಜಗನ್ನಾಥ ಇದಲಾಯಿ, ಕುಮಾರಿ ಉಮಾ ಪಾಟೀಲ, ಜಗನ್ನಾಥ ಶೀರಿಕಾರ ಮೊದಲಾದ ಗಣ್ಯರು ಉಪಸ್ಥಿತರಿದ್ದರು.

ಸಮಾರಂಭಕ್ಕೂ ಮುನ್ನ ಶ್ರೀ ರಂಭಾಪುರಿ ಜಗದ್ಗುರುಗಳನ್ನು ಸಾರೋಟ ಉತ್ಸವದ ಮೂಲಕ ಬರಮಾಡಿಕೊಳ್ಳಲಾಯಿತು.

## ಮಾದಕ ವಸ್ತು ಮುಕ್ತಕ್ಕೆ ಯುವಕರು ಕೈಜೋಡಿಸಲಿ : ಡಾ. ಗವಿಸಿದ್ದಪ್ಪ ಮುತ್ತಾಳ್



**■ ವಿಜಯಸಾಕ್ಷಿ ಸುದ್ದಿ, ಅಳವಂಡಿ**

ವಿದ್ಯಾರ್ಥಿ ಜೀವನವು ಅತ್ಯಮೂಲ್ಯವಾಗಿದ್ದು, ಮಾದಕ ವಸ್ತುಗಳ ಸೇವನೆ ಸೇರಿದಂತೆ ವಿವಿಧ ದುಶ್ಚಟಗಳಿಗೆ ದಾಸರಾಗಿ ಅದನ್ನು ಹಾಳು ಮಾಡಿಕೊಳ್ಳಬಾರದು ಎಂದು ಪ್ರಾಂಶುಪಾಲರಾದ ಡಾ. ಗವಿಸಿದ್ದಪ್ಪ ಮುತ್ತಾಳ್ ಹೇಳಿದರು.

ಇಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ, ಶ್ರೀ ಶಿವಮೂರ್ತಿ ಸ್ವಾಮಿ ಇನಾಮದಾರ್ ಕಟ್ಟಿಮನಿ ಹಿರೇಮಠ ಸರಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಅಳವಂಡಿ ಪೊಲೀಸ್ ಠಾಣೆ ಇವರ ಸಂಯುಕ್ತಾಶ್ರಯದಲ್ಲಿ ನಡೆದ ಅಂತರರಾಷ್ಟ್ರೀಯ ಮಾದಕ ವಸ್ತುಗಳ ಬಳಕೆ ಮತ್ತು ಕಳ್ಳ ಸಾಗಾಣಿಕೆ ವಿರೋಧಿ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಮಾದಕ ವಸ್ತುಗಳ ಸೇವನೆಯೂ ಅನೇಕ ಅಪರಾಧಕೃತ್ಯಕ್ಕೆ ದಾರಿ ಮಾಡಿಕೊಡುತ್ತದೆ. ಮಾದಕ ವ್ಯಸನದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಜತೆಗೆ ಅದನ್ನು ಸಂಪೂರ್ಣ ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಪ್ರತಿಯೊಬ್ಬರು ಕೈಜೋಡಿಸಬೇಕು ಎಂದರು.

ಮಾದಕ ವ್ಯಸನಕ್ಕೆ ದಾಸರಾಗುತ್ತಿರುವ ಯುವಜನತೆ ತಮ್ಮ ಜೀವನವನ್ನೇ ಹಾಳು ಮಾಡಿಕೊಂಡಿದ್ದಾರೆ. ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿಗಳು ಅರಿತುಕೊಂಡು ಬೇರೆಯವರಿಗೂ ಜಾಗೃತಿ ಮೂಡಿಸಿ ವ್ಯಸನ ಮುಕ್ತ ಸಮಾಜ ನಿರ್ಮಾಣ ಮಾಡಲು ವಿದ್ಯಾರ್ಥಿಗಳ ಶ್ರಮಿಸಬೇಕು ಎಂದರು.

ಅಳವಂಡಿ ಪೊಲಿಸ್ ಠಾಣೆಯ ಪಿ.ಎಸ್.ಐ ನಾಗರಾಜ್ ಹೆಚ್ ಮಾತನಾಡಿ, ಮಾದಕವಸ್ತುಗಳ ಸೇವನೆ ಆರೋಗ್ಯಕ್ಕೆ ಹಾನಿಕಾರಕ ಹಾಗಾಗಿ ವಿದ್ಯಾರ್ಥಿಗಳು ಇದರಿಂದ ದೂರವಿದ್ದು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕೆಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಈ ಸಂದರ್ಭದಲ್ಲಿ ಅಳವಂಡಿ ಪೊಲಿಸ್ ಠಾಣೆಯ ಎ.ಎಸ್.ಐ ಶಶಿಕಾಂತ್, ಕಾಲೇಜಿನ ಉಪನ್ಯಾಸಕರಾದ ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಪ್ರೊ. ಇಮಾಮ್ ಸಾಬ್, ಇಂಗ್ಲಿಷ್ ವಿಭಾಗದ ಮುಖ್ಯಸ್ಥರಾದ ಪ್ರೊ. ಮಲ್ಲಿಕಾರ್ಜುನ್, ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ಪ್ರೊ. ಜಗದೀಶ್,

ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ನಾಗೇಂದ್ರಪ್ಪ, ಉಪನ್ಯಾಸಕರಾದ ವಿಜಯ್ ಕುಮಾರ್ ಕುಲಕರ್ಣಿ,ಸಿದ್ದಪ್ಪ, ಪ್ರದೀಪ್ ಪಲ್ಲೇದ್ , ವೆಂಕಟೇಶ್ , ಅನಿಲ್, ವಿನಾಯಕ್ ನಾಯ್ಕ್, ವೀರಯ್ಯ ಮಠದ್, ರಹಿಮಾನ್ ಸಾಬ್ , ರಾಘವೇಂದ್ರ , ಹನುಮೇಶ್ , ಕೃಷ್ಣ, ಹಾಗೂ ಬೋಧಕ ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

**ಯೋಗೋತ್ಸವ-2024 ಸಮಾರೋಪ ಸಮಾರಂಭದಲ್ಲಿ ಡಾ. ಕಲ್ಮೇಶ ಮೂರಶಿಳ್ಳಿನ**

# ಯೋಗ ಚಟುವಟಿಕೆ ರಾಷ್ಟ್ರದ ಅಭಿವೃದ್ಧಿಗೆ ಸಹಕಾರಿ

**■ ವಿಜಯಸಾಕ್ಷಿ ಸುದ್ದಿ, ಗದಗ**

'ಯೋಗ' ಎಂಬ ಎರಡಕ್ಷರದ ಶಬ್ದ ಇಡೀ ಜಗತ್ತನ್ನೇ ಚಕಿತಗೊಳಿಸಿದೆ. ಭಾರತೀಯರಿಗೆ ಸೋಜಿಗ ಮತ್ತು ಅಭಿಮಾನದ ವಿಷಯವಾಗಿದೆ. ಕಾರಣ ವಿಶ್ವದಾದ್ಯಂತ ಯೋಗ ದಿನಾಚರಣೆ ಆಚರಿಸಿದಂತೆ ಉಳಿದ ಯಾವ ದಿನಾಚರಣೆಗಳನ್ನು ಆಚರಿಸುವದು ಬಹು ವಿರಳ. ಯೋಗ ದಿನಾಚರಣೆ ಬೌದ್ಧಿಕ ಹಾಗೂ ಪ್ರಾಯೋಗಿಕ ದಿನಾಚರಣೆಯಾಗಿದೆ. ಯೋಗ ಒಂದು ಆಧ್ಯಾತ್ಮ ವಿದ್ಯೆಯಾಗಿರದೆ ಸರ್ವ ಕ್ಷೇತ್ರಗಳಲ್ಲಿ ವಿಕಾಸ ಹೊಂದಲು ಸಹಕರಿಸುವ ಅತ್ಯದ್ಭುತ ಕಲೆ, ಸಾಹಿತ್ಯ, ಶಿಕ್ಷಣ, ಕ್ರೀಡೆ, ವಿಜ್ಞಾನ ಏನೆಲ್ಲ ಆಗಿದೆ ಎಂದು ವೈದ್ಯ, ಸರಾಫ ವರ್ತಕ ಮತ್ತು ಸಾಹಿತಿ ಡಾ. ಕಲ್ಮೇಶ ಮೂರಶಿಳ್ಳಿನವರ ಅಭಿಪ್ರಾಯಪಟ್ಟರು.

10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ, ಗದಗ ಜಿಲ್ಲಾ ಯೋಗ ಒಕ್ಕೂಟ ಹಾಗೂ ಗದಗ ಜಿಲ್ಲಾ ಅಮೆಚೂರ್ ಯೋಗಾಸನ ಕ್ರೀಡಾ ಸಂಸ್ಥೆ ಗದಗ ಇವರುಗಳ ಸಹಯೋಗದಲ್ಲಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ನಡೆದ 'ಯೋಗೋತ್ಸವ' ಕಾರ್ಯಕ್ರಮದ ಸಮಾರೋಪ ಸಮಾರಂಭಕ್ಕೆ



ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಯೋಗೋತ್ಸವ-24ರ ಅಡಿಯಲ್ಲಿ ಯೋಗ ಸೇವೆ ಸಲ್ಲಿಸಿದವರನ್ನು ಸನ್ಮಾನಿಸುವದು, ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ, ಪ್ರಶಸ್ತಿ ಪತ್ರಗಳನ್ನು ನೀಡಿ ಪ್ರೋತ್ಸಾಹಿಸುತ್ತಿರುವುದು ಶ್ಲಾಘನೀಯ ಕಾರ್ಯಗಳಾಗಿವೆ. ಈ ಕಾರ್ಯಗಳ ಯಶಸ್ಸಿಗೆ ಯೋಗಾಚಾರ್ಯ ಕೆ.ಎಸ್. ಪಲ್ಲೇದರು ಪ್ರೇರಕರಾಗಿರುವದು ನಮಗೆಲ್ಲರಿಗೂ ಸಂತಸ ತಂದಿದೆ ಎಂದು ಹೇಳಿದರು.

ಗದಗ ಜಿಲ್ಲೆಯಾದ್ಯಂತ ಯೋಗದ ಮಹತ್ವ ತಿಳಿಸಿ, ಸ್ವಸ್ಥ ಸಮಾಜ ನಿರ್ಮಾಣ ಕಾರ್ಯದಲ್ಲಿ ಶ್ರಮಿಸುತ್ತಿರುವ ಡಾ. ಅಶೋಕ ಮತ್ತಿಗಟ್ಟಿ, ದಶರಥ, ಕೊಟೇಗೌಡ, ರವಿ ಉಮಚಗಿ, ಅಂಜನೇಶ ಮಾನೆ, ಪ್ರಕಾಶ ಮದ್ದಿನ, ಯಶವಂತ ಮತ್ತೂರ, ಮಂಜುಳಾ ಇಟಗಿ, ಸುನಂದಾ ಜ್ಯಾನೋಪಂತರ, ಸುಮಂಗಲಾ ಹದ್ಲಿ, ಸುಧಾ ಪಾಟೀಲ, ಮಂಗಳಾ ಸಜ್ಜನರ ಇವರನ್ನು ಗೌರವಾದರಗಳಿಂದ ಸನ್ಮಾನಿಸಿ, ಸ್ಪರ್ಧೆಗಳ ವಿಜೇತರಿಗೆ ಬಹುಮಾನ ವಿತರಿಸಲಾಯಿತು.

ವೇದಿಕೆಯಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಡಾ. ಯು.ವಿ. ಪುರದ, ಡಾ. ಮೀನಾಕ್ಷಿ ಮತ್ತಿಗಟ್ಟಿ, ಸಂಗೀತ ನಾಕೋಡ ಇದ್ದರು. ಸಮಾರಂಭದಲ್ಲಿ ಡಾ. ಎಸ್.ಕೆ. ನಾಲತ್ವಾಡಮಠ, ಪ್ರೊ. ಅನ್ನದಾನಿ ಹಿರೇಮಠ, ವಿ.ಪಿ. ಸವಡಿ, ಎಸ್.ಬಿ. ಮೆಣಸಗಿ, ಎಚ್.ಟಿ. ಸಂಜೀವಸ್ವಾಮಿ, ಗೌರಿ ಜಿರಂಕಳಿ, ಲಲಿತಾ ಅಣ್ಣಿಗೇರಿ, ಶಶಿಕಲಾ ಬೆಲ್ಲದ, ಶಾಂತಾ ಕುಂದಗೋಳ, ಜಯಶ್ರೀ ಡಾವಣಗೇರಿ ಸೇರಿದಂತೆ ಯೋಗಾಸನ ಕ್ರೀಡಾಪಟುಗಳು, ಯೋಗಾಸಕ್ತ ಬಂಧುಗಳು ಉಪಸ್ಥಿತರಿದ್ದರು.

ಡಾ. ಎಂ.ವಿ. ಐಹೊಳ್ಳಿ ಸ್ವಾಗತ ಕೋರಿದರು. ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಪ್ರಾಸ್ತಾವಿಕ ನುಡಿ ತಿಳಿಸಿ ಕಾರ್ಯಕ್ರಮ ನಿರೂಪಿಸಿದರು. ಆನಂದ ಬದಿ ವಂದಿಸಿದರು.

ಅಧ್ಯಕ್ಷತೆ ವಹಿಸಿದ ಖ್ಯಾತ ವಾಗ್ಮಿಗಳಾದ ಪ್ರಾ. ಕೆ.ಎಚ್. ಬೇಲೂರ ಮಾತನಾಡಿ, ಪ್ರಸ್ತುತ ದಿನಮಾನದಲ್ಲಿ ಕಲುಷಿತ ನೀರು, ಗಾಳಿ, ಆಹಾರ, ಪರಿಸರಗಳಿಂದ ಜನತೆಯ ಆರೋಗ್ಯ ಕ್ಷೀಣಿಸುತ್ತಿದೆ. ಯೋಗವು ಈ ಸಮಸ್ಯೆ ದೂರಗೊಳಿಸಲು ಮುಖ್ಯ ಪಾತ್ರ ವಹಿಸುತ್ತದೆ. ಅನೇಕ ರೋಗಗಳನ್ನು ನಿವಾರಿಸುತ್ತದೆ. ಯೋಗ ದಿನಾಚರಣೆಯಿಂದ ಜನತೆಯಲ್ಲಿ ಆರೋಗ್ಯದ ಅರಿವು ಮೂಡಿದೆ. ಯೋಗ ಪ್ರಸಾರಕ್ಕೆ ಸರಕಾರವೂ ಪ್ರೋತ್ಸಾಹಿಸಬೇಕೆಂದು ತಿಳಿಸಿದರು.

## ಉಭಯ ಶ್ರೀಗಳ ಭಾವಚಿತ್ರ ಮೆರವಣಿಗೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಪಂ.ಪಂಚಾಕ್ಷರಿ ಗವಾಯಿಗಳವರ 80ನೇ ಹಾಗೂ ಪಂ.ಪುಟ್ಟರಾಜ ಕವಿ ಗವಾಯಿಗಳವರ 14ನೇ ಪುಣ್ಯಸ್ಮರಣೆಯ ಅಂಗವಾಗಿ ಜರುಗಿದ ಉಭಯ ಶ್ರೀಗಳ ಭಾವಚಿತ್ರ ಮೆರವಣಿಗೆಗೆ ಪೂಜ್ಯಶ್ರೀ ಕಲ್ಲಯ್ಯಜ್ಜನವರು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ವೀರೇಶ್ವರ ಪುಣ್ಯಾಶ್ರಮ ಸೋಲ್ ಟ್ರಸ್ಟ್‌ನ ಸದಸ್ಯ ಪಿ.ಸಿ. ಹಿರೇಮಠ, ಹಿರಿಯರಾದ ಸಿದ್ದೇಶ್ವರ ಶಾಸ್ತ್ರಿಗಳು ತೆಲ್ಲೂರ, ಮುರೇಗೆಪ್ಪ ಶೆಟ್ಟರ ಮುಂತಾದವರು ಇದ್ದರು.

ವೀರೇಶ್ವರ ಪುಣ್ಯಾಶ್ರಮದಿಂದ ಆರಂಭಗೊಂಡ ಮೆರವಣಿಗೆ ನಗರದ ಪ್ರಮುಖ



ರಸ್ತೆಗಳಲ್ಲಿ ಸಂಚರಿಸಿತು. ಈ ಮೆರವಣಿಗೆಯಲ್ಲಿ ದೇವರಹೊಸಪೇಟೆಯ ಶ್ರೀ ಸಿದ್ದರಾಮೇಶ್ವರ ಭಜನಾ ಸಂಘ, ಬಿಸರಳ್ಳಿಯ ಬ್ಯಾಂಡ್ ಕಂಪನಿ, ಬಂಟನೂರಿನ ಲೋಕಾಪೂರ ಶ್ರೀ ಬ್ರಹ್ಮಜಟ್ಟಿಂಗೇಶ್ವರ ಡೊಳ್ಳಿನ ಸಂಘ, ಮುಶಿಗೇರಿ ಶರಣಬಸವೇಶ್ವರ ಭಜನಾ ಸಂಘ, ಸವಡಿ ಸಂಗಮೇಶ್ವರ ಭಜನಾ ಸಂಘ ಮುಂತಾದ ವಾದ್ಯಮೇಳಗಳು, ಭಜನೆ, ಕರಡಿ ಮಜಲುಗಳು ಮೆರವಣಿಗೆಯಲ್ಲಿ ಪಾಲ್ಗೊಂಡು ಸಂಗಮ್ಮ ಹೂಲಿ ಅವರ ಮನೆ ತಲುಪಿ, ಅಲ್ಲಿಂದ ರಥೋತ್ಸವದ ಕಳಸ ಉತ್ಸವದೊಂದಿಗೆ ವೀರೇಶ್ವರ ಪುಣ್ಯಾಶ್ರಮಕ್ಕೆ ಮರಳಿತು.

## ಇಂದು ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಜೂನ್ 27 ರಂದು ಬೆಳಿಗ್ಗೆ 10.30 ಗಂಟೆಗೆ ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿ ಆಚರಿಸಲಾಗುವುದು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ್ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಬಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್ , ನರಗುಂದ ಶಾಸಕ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ- ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ಮಹೇಶ ದಾಸರ, ಉಪಾಧ್ಯಕ್ಷರಾದ ಸುನಂದಾ ಬಾಕಳೆ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಜಿ ಆಗಮಿಸುವರು.

ವಾಣಿಜ್ಯ ತೆರಿಗೆ ಇಲಾಖೆಯ ಆಯುಕ್ತರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ ಸ್ವಾಗತ ಕೋರಿದ್ದಾರೆ.

## ದೇವಸ್ಥಾನಗಳ ಮಹತ್ವ ತಿಳಿಸುವ ಕಾರ್ಯವಾಗಲಿ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಇಲ್ಲಿನ ಶಿಗ್ಲಿ ನಾಕಾ ಬಳಿ ಇರುವ ಶ್ರೀ ಹನುಮಂತ ದೇವರ ದೇವಸ್ಥಾನವು ಶಿಥಿಲಗೊಂಡಿರುವ ಹಿನ್ನೆಲೆಯಲ್ಲಿ ಅಲ್ಲಿನ ಭಕ್ತ ಮಂಡಳಿಯವರು ಸೇರಿ ದೇವಸ್ಥಾನದ ಜೀರ್ಣೋದ್ಧಾರ ಕಾರ್ಯಕ್ಕೆ ಮುಂದಾಗಿದ್ದಾರೆ. ಬುಧವಾರ ದೇವಸ್ಥಾನದ ನೂತನ ಕಟ್ಟಡ ಕಾಮಗಾರಿಗೆ ಪಟ್ಟಣದ ಕರೇವಾಡಿಮಠದ ಶ್ರೀ ಮಳೆ ಮಲ್ಲಿಕಾರ್ಜುನ ಶಿವಾಚಾರ್ಯರ ಸಾನ್ನಿಧ್ಯದಲ್ಲಿ ಶಾಸಕ ಡಾ.ಚಂದ್ರು ಲಮಾಣಿ ಭೂಮಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮನುಷ್ಯರಿಗೆ ಮನಃಶಾಂತಿ ಲಭಿಸಲು ದೇವಸ್ಥಾನಗಳ ಅವಶ್ಯಕತೆಯಿದ್ದು, ಅವುಗಳ ಸಾಕಾರಕ್ಕಾಗಿ ಪ್ರತಿಯೊಬ್ಬರ ಸಹಕಾರ ಅವಶ್ಯವಾಗಿದೆ.



ದೇವಸ್ಥಾನಗಳು ನಮ್ಮ ಸಂಸ್ಕೃತಿ-ಸಂಪ್ರದಾಯಗಳ ಪ್ರತೀಕವಾಗಿದ್ದು, ಅವುಗಳನ್ನು ಉಳಿಸಿಕೊಂಡು ಹೋಗುವದರ ಜೊತೆಗೆ ಮುಂದಿನ ಪೀಳಿಗೆಗೆ ದೇವಸ್ಥಾನಗಳ ಮಹತ್ವ ತಿಳಿಸುವ ಕಾರ್ಯವನ್ನು ಮಾಡಬೇಕಾಗಿದೆ. ಈ ನಿಟ್ಟಿನಲ್ಲಿ ಇಲ್ಲಿನ ಹನುಮಂತದೇವರ ದೇವಸ್ಥಾನ ಮರುನಿರ್ಮಾಣ ಕಾರ್ಯಕ್ಕೆ ಭಕ್ತವೃಂದ ವಿಶೇಷ ಆಸಕ್ತಿಯಿಂದ ಮುಂದಾಗಿದ್ದು ಉತ್ತಮ ಕಾರ್ಯವಾಗಿದೆ. ದೇವಸ್ಥಾನದ ನಿರ್ಮಾಣದಲ್ಲಿ ಸರಕಾರದಿಂದ ದೊರೆಯುವ ಅನುದಾನವನ್ನು ದೊರಕಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು.

ಸಭೆಯಲ್ಲಿ ಮುಖಂಡರಾದ ಜಿ.ಎಸ್. ಗಡ್ಡದೇವರಮಠ, ಸುನೀಲ ಮಹಾಂತಶೆಟ್ಟರ, ಗುರುನಾಥ ದಾನಪ್ಪನವರ, ಚನ್ನಪ್ಪ ಜಗಲಿ, ನಿಂಗಪ್ಪ ಬನ್ನಿ, ನವೀನ ಬೆಳ್ಳಟ್ಟಿ, ತಿಪ್ಪಣ್ಣ ಸಂಶಿ, ನಾಗರಾಜ ಮಡಿವಾಳರ, ಪೂರ್ಣಾಜಿ ಖರಾಟೆ, ಎನ್. ಆರ್.ಸಾತಪೂತೆ, ಸಂಗಮೇಶ ಬೆಳವಲಕೊಪ್ಪ, ಫಕ್ಕೀರೇಶ ಮ್ಯಾಟಣ್ಣವರ, ಹೊಳಲಪ್ಪಗೌಡ ಪಾಟೀಲ, ಜಗದೀಶ ಪಿಳ್ಳಿ, ಶಿವಪ್ಪ ಬಸಾಪೂರ, ರಾಮಣ್ಣ ಬಳಗಾನೂರ, ಮಂಜುನಾಥ ಸಾತಪೂತೆ, ಸತೀಶ ಖರಾಟೆ, ಗಿರೀಶ ಕಲ್ಮಠ, ಸೋಮಣ್ಣ ಬಸಾಪೂರ, ನೀಲಪ್ಪ ಬಸಾಪೂರ, ಮುತ್ತಣ್ಣ ಕಟಗಿ ಸೇರಿದಂತೆ ಅನೇಕರಿದ್ದರು.

## ಅರ್ಜಿ ಆಹ್ವಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ಪ್ರವಾಸಿ ತಾಣಗಳಲ್ಲಿ ಪ್ರವಾಸಿ ಮಾರ್ಗದರ್ಶಿಯಾಗಿ ಕಾರ್ಯನಿರ್ವಹಿಸಲು ಎಲ್ಲ ವರ್ಗದ ಆಸಕ್ತ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಜುಲೈ 24 ಆಗಿದ್ದು ಅಭ್ಯರ್ಥಿಯು ದ್ವಿತೀಯ ಪಿ.ಯು.ಸಿ. ಉತ್ತೀರ್ಣರಾಗಿರಬೇಕು.

ವಯೋಮಿತಿ 25 ವರ್ಷದಿಂದ 45 ವರ್ಷದೊಳಗಿರಬೇಕು. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಎ.ಸಿ. ಕಚೇರಿ ಕಟ್ಟಡ, ಗದಗ ಜಿಲ್ಲೆ, ಗದಗ -582 103 ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ. ಕಚೇರಿಯ ದೂರವಾಣಿ ಸಂಖ್ಯೆ 08372-233017 ಸಂಪರ್ಕಿಸಬಹುದಾಗಿದೆ.

## ಕೋಟ್ಪಾ ಕಾಯ್ದೆ ಕುರಿತು ಜಾಗೃತಿ ಕಾರ್ಯಕ್ರಮ

**■ ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಸಮೀಕ್ಷಣಾಧಿಕಾರಿಗಳಾದ ಡಾ. ವೆಂಕಟೇಶ ರಾಠೋಡ್ ಮಾರ್ಗದರ್ಶನದಲ್ಲಿ ನಗರದ ಸಿ.ಡಿ.ಓ ಜೈನ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯಲ್ಲಿ ತಂಬಾಕು ವ್ಯಸನದಿಂದಾಗುವ ದುಷ್ಪರಿಣಾಮ ಹಾಗೂ ಕೋಟ್ಪಾ ಕಾಯ್ದೆ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರರಾದ ಗೋಪಾಲ ಸುರುಪುರ, ಶಾಲೆಯ ಮುಖ್ಯೋಪಾಧ್ಯಾಯೆ ಮಾಧುರಿ ಹಿರೇಮಠ, ಬಸಮ್ಮ ಚಿತ್ತರಗಿ, ಸಿ.ಡಿ.ಓ ಜೈನ್ ಆಂಗ್ಲ ಮಾಧ್ಯಮ ಶಾಲೆಯ ಶಿಕ್ಷಕ ಸಿಬ್ಬಂದಿಗಳು ಹಾಗೂ



ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ತಂಬಾಕು ಸೇವನೆಯಿಂದ ಅದರಲ್ಲಿ ಇರುವ ನಿಕೋಟಿನ್ ಎಂಬ ರಾಸಾಯನಿಕ ವಸ್ತು ಮಾನವನ ದೇಹದಲ್ಲಿನ ನರಮಂಡಲವನ್ನು ದುರ್ಬಲ ಹಾಗೂ ಸಂಕುಚಿತಗೊಳಿಸಿ ದೇಹದ ಎಲ್ಲಾ ಅಂಗಗಳಿಗೆ ರಕ್ತ ಪೂರೈಕೆ ಮಾಡಲು ಅಡಚಣೆ ಉಂಟಾಗಿ ಅಂಗಗಳು ದುರ್ಬಲಗೊಂಡು ಹಾಳಾಗುತ್ತವೆ. ಇದರಿಂದ ಹೃದಯ ಸಂಬಂಧಿ ಖಾಯಿಲೆ, ಪಾರ್ಶ್ವವಾಯು, ಕ್ಯಾನ್ಸರ್, ಚರ್ಮ ಸುಕ್ಕುಗಟ್ಟುವುದು, ಕಣ್ಣಿನ ಪೊರೆ, ಗ್ಯಾಂಗ್ರಿನ್ ಇಂತಹ ಗಂಭೀರ ಖಾಯಿಲೆಗಳಿಗೆ ಬಲಿಯಾಗುತ್ತಿದ್ದು, ಪುರುಷರಲ್ಲಿ ನಪುಂಸಕತೆ, ಮಹಿಳೆಯರಲ್ಲಿ ನಿರ್ಜೀವ ಜನನ, ಅಕಾಲಿಕ ಜನನ, ಕಡಿಮೆ ತೂಕದ ಮಗು ಜನನ ಉಂಟಾಗುತ್ತದೆ ಎಂದು ಅರಿವು ಮೂಡಿಸಲಾಯಿತು.


ಕರ್ನಾಟಕ ಸರ್ಕಾರ

**ಕೃಷ್ಣಾ ಮೇಲ್ದಂಡೆ ಯೋಜನೆ**

**ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರ, ಬಾಗಲಕೋಟೆ**

ಕ್ರ.ಸಂ. ಪುಅ.ಬಾ.ಪ.ಅ.ಪ್ರಾ.ಸಿಆರ್/2024-25

ಆಲಮಟ್ಟಿ ಜಲಾಶಯದ ಎಫ್.ಆರ್.ಎಲ್. 523-525 ಮೀಟರ ಹಿನ್ನೀರಿನಲ್ಲಿ ಮುಳುಗಡೆಯಾಗಲಿರುವ ಬಾಗಲಕೋಟೆ ನಗರದ ವಾರ್ಡ ನಂ.10ರಲ್ಲಿ ಕೈಬಿಟ್ಟ ಆಸ್ತಿಗಳನ್ನು ಭೂಸ್ವಾಧೀನಪಡಿಸಿಕೊಳ್ಳುತ್ತಿರುವ ಮಾಲೀಕರಿಗೆ ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆಯ ಕಟ್ಟಡ ಸ್ವಾಧೀನ ಪ್ರಕ್ರಿಯೇಯಲ್ಲಿ ಪಾರದರ್ಶಕತೆ ಮತ್ತು ನ್ಯಾಯೋಜಿತ ಪರಿಹಾರ ಹಕ್ಕು ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆಯ ಅಧಿನಿಯಮ 2013 (The Right to Fair Compensation Transparency in Land Acquisition Rehabilitation and Resettlement Act-2013) ಕಲಂ 16(2)ರನ್ವಯ ಪುನರ್‌ವಸತಿ ಹಾಗೂ ಪುನರ್‌ವ್ಯವಸ್ಥೆಯ ಕರಡು ಯಾದಿಯನ್ನು 1ಮಾನ್ಯ ಜಿಲ್ಲಾಧಿಕಾರಿಗಳು, ಜಿಲ್ಲಾ ಆಡಳಿತ ಭವನ ನವನಗರ ಬಾಗಲಕೋಟೆ. 2. ಮಾನ್ಯ ಮುಖ್ಯ ಇಂಜಿನೀಯರರು, ಬಾ.ಪ.ಅ.ಪ್ರಾ. ಬಾಗಲಕೋಟೆ, 3.ಮಾನ್ಯ ಉಪ ವಿಭಾಗಾಧಿಕಾರಿಗಳು, ನವನಗರ ಬಾಗಲಕೋಟೆ, 4.ಮಾನ್ಯ ತಹಶೀಲ್ದಾರ ಕಚೇರಿ ಬಾಗಲಕೋಟೆ. 5. ಮಾನ್ಯ ಆಯುಕ್ತರು ನಗರ ಸಭೆ ಬಾಗಲಕೋಟೆ 6. ವಿಶೇಷ ಭೂಸ್ವಾಧೀನಾಧಿಕಾರಿಗಳು, ಬಾ.ಪ.ಅ.ಪ್ರಾ. ಬಾಗಲಕೋಟೆ ಇವರಲ್ಲಿ ಲಭ್ಯ ಇರುವುದು.

**ಸಭೆಯನ್ನು ನಿಗಧಿಪಡಿಸಿದ ವಿವರ**

| ಗ್ರಾಮ | ದಿನಾಂಕ | ಸಮಯ | ಸ್ಥಳ |
|---|---|---|---|
| ವಾರ್ಡ್ ನಂ. 10 | 02/07/2024 | 11:00 ಎ.ಎಮ್ | ಶ್ರೀ ಹನುಮಾನ ದೇವಸ್ಥಾನ ಬಾಗಲಕೋಟೆ |

ಮೇಲ್ಕಾಣಿಸಿದ ಸಂಬಂಧಿಸಿದ ಬಾಧಿತಗೊಳ್ಳುವ ಕುಟುಂಬಗಳ ಎಲ್ಲ ವಯಸ್ಕ ಸದಸ್ಯರು ಕಾರ್ಯಕ್ರಮಕ್ಕೆ ಆಗಮಿಸಿ ಆಹವಾಲು/ ಆಕ್ಷೇಪಣೆಗಳು ಇದ್ದಲ್ಲಿ ಲಿಖಿತವಾಗಿ ಸಲ್ಲಿಸಬೇಕು.

ಸೂಚನೆ: ಹೆಚ್ಚಿನ ವಿವರ ಮತ್ತು ಮಾಹಿತಿಗಾಗಿ ವೆಬ್‌ಸೈಟ್ www.bagalkot/nic.in/ukp.html ವಿಳಾಸದಲ್ಲಿ ಮತ್ತು ಪುನರ್‌ವಸತಿ ಅಧಿಕಾರಿಗಳ ಕಾರ್ಯಾಲಯ ಬಾ.ಪ.ಅ.ಪ್ರಾ, ಭಾಗಲಕೋಟೆ ಇವರ ಕಛೇರಿಗೆ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ.

ಸಹಿ/-
ಪುನರ್ವಸತಿ ಅಧಿಕಾರಿಗಳು ಹಾಗೂ
ಪದನಿಮಿತ್ತ ಆಡಳಿತಾಧಿಕಾರಿಗಳು
ಬಾ.ಪ.ಅ.ಪ್ರಾ. ಬಾಗಲಕೋಟೆ

ವಾ.ಸಾ.ಇ/ಬಾಗಲಕೋಟೆ/59/ದೇಶಪಾಂಡೆಪಬ್ಲಿಸಿಟಿ/2024-25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka